

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ

VOLUME : 2 ISSUE: 126 ಸಂಪುಟ: 02 ಸಂಚಿಕೆ: 126 ಪುಟಗಳು: 04 munjanevarthe 19 WEDNESDAY JUNE 2024 19 ಬುಧವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ 9663122276 www.munjanevarthe.com



ನನ್ನ ಕ್ಷೇತ್ರದಲ್ಲಿ ಅವೈಜ್ಞಾನಿಕ ಕಾಮಗಾರಿಗೆ ಅವಕಾಶವಿಲ್ಲ ವಿವರಪುಟ 02

ವೈದ್ಯರು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯವಹಿಸಬಾರದು ವಿವರಪುಟ 03

ನೀವು ಸೇವೆಯಲ್ಲಿರಲು ಅನ್‌ಫಿಟ್: ಸಿಎಂ ಸಿದ್ದರಾಮಯ್ಯ ವಿವರಪುಟ 04


# 9.26 ಕೋಟಿ ರೈತರಿಗೆ ಹಣ ಬಿಡುಗಡೆ

ವಾರಾಣಸಿ (ಉತ್ತರಪ್ರದೇಶ): ತಮ್ಮನ್ನು ಸತತ ಮೂರನೇ ಬಾರಿಗೆ ಗೆಲ್ಲಿಸಿ ಸಂಸತ್ತಿಗೆ ಆಯ್ಕೆ ಮಾಡಿದ ಮತದಾರರಿಗೆ ಧನ್ಯವಾದ ಸಲ್ಲಿಸಲು ಪ್ರಧಾನಿ ನರೇಂದ್ರ ಮೋದಿ ವಾರಾಣಸಿಗೆ ಮಂಗಳವಾರ ಭೇಟಿ ನೀಡಿದರು. ಪ್ರಧಾನಿಯಾದ ಬಳಿಕ ಮೊದಲ ಕಡತಕ್ಕೆ ಸಹಿ ಹಾಕಿದಂತೆ ದೇಶದ ರೈತರಿಗೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯ ಹಣವನ್ನೂ ಬಿಡುಗಡೆ ಮಾಡಿದರು.

ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ 17ನೇ ಕಂತಿನ 20 ಸಾವಿರ ಕೋಟಿ ರೂಪಾಯಿ ನೆರವಿನ ಹಣವು 9.26 ಕೋಟಿ ರೈತರಿಗೆ ತಲುಪಲು ಚಾಲನೆ ನೀಡಿದರು. ಜೊತೆಗೆ, ಕೃಷಿ ವಿಸ್ತರಣಾ ಕಾರ್ಯಕರ್ತರಾಗಿ ಕೆಲಸ ಮಾಡಲು ತರಬೇತಿ ಪಡೆದ 30 ಸಾವಿರಕ್ಕೂ ಹೆಚ್ಚು ಮಹಿಳಾ ಸ್ವಸಹಾಯ ಗುಂಪುಗಳಿಗೆ ಪ್ರಮಾಣಪತ್ರವನ್ನೂ ವಿತರಿಸಿದರು.

ಬಳಿಕ ಮಾತನಾಡಿದ ಅವರು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜನರು ನೀಡಿದ ಜನಾದೇಶವು ಅಭೂತಪೂರ್ವ ಮತ್ತು ಇತಿಹಾಸ ಸೃಷ್ಟಿಸಿದೆ. ರೈತರು ಮತ್ತು ಬಡವರಿಗೆ ಸಂಬಂಧಿಸಿದ ಹೊಸ ಸರ್ಕಾರದ ಮೊದಲ ನಿರ್ಧಾರವಾಗಿ ನೆರವಿನ ಹಣವನ್ನು ಬಿಡುಗಡೆ ಮಾಡಲಾಗಿದೆ. ಕಾಶಿ ವಿಶ್ವನಾಥ, ಗಂಗಾಮಾತೆ ಮತ್ತು ಕಾಶಿಯ ಜನರ ಪ್ರೀತಿಯಿಂದ ನಾನು ಮೂರನೇ ಬಾರಿಗೆ ದೇಶದ 'ಪ್ರಧಾನ ಸೇವಕ'ನಾಗಿ ಆಯ್ಕೆಯಾಗಿದ್ದೇನೆ ಎಂದರು. ದೇಶದ 9.26 ಕೋಟಿಗೂ



ಹೆಚ್ಚು ರೈತರಿಗೆ ಪಿಎಂ ಕಿಸಾನ್ ಸಮ್ಮಾನ್ ನಿಧಿಯ 20 ಸಾವಿರ ಕೋಟಿ ರೂಪಾಯಿಯ 17 ನೇ ಕಂತಿನ ಹಣವನ್ನೂ ಬಿಡುಗಡೆ ಮಾಡಲಾಗಿದೆ. ಮುಂಗಾರು ಶುರುವಾಗುತ್ತಿದ್ದು, ಸರ್ಕಾರ ನೀಡಿದ ಹಣದಲ್ಲಿ ರೈತರು ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ಬಳಸಿಕೊಳ್ಳಲು ನೆರವಾಗಲಿದೆ ಎಂದು ಹೇಳಿದರು.

ಉತ್ತರ ಪ್ರದೇಶದ ರಾಜ್ಯಪಾಲರಾದ ಆನಂದಿಬೆನ್ ಪಟೇಲ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ರಾಜ್ಯದ ಹಲವು ಸಚಿವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕೇಂದ್ರ ಕೃಷಿ ಸಚಿವಾಲಯದ ಪ್ರಕಾರ, ದೇಶಾದ್ಯಂತ 732 ಕೃಷಿ ವಿಜ್ಞಾನ ಕೇಂದ್ರದ ಸಿಬ್ಬಂದಿ, ಒಂದು ಲಕ್ಷಕ್ಕೂ ಹೆಚ್ಚು ಮೂಲ ಕೃಷಿ ಸಹಕಾರ ಸಂಘಗಳು ಮತ್ತು 5 ಲಕ್ಷ ಜಂಟಿ ಸೇವಾ ಕೇಂದ್ರಗಳು ಸೇರಿದಂತೆ 2.5 ಕೋಟಿ ರೈತರು ಈ ಕಾರ್ಯಕ್ರಮದಲ್ಲಿ ಇದ್ದರು.

# ನೂತನ ಕಛೇರಿಯ ಲೋಕಾರ್ಪಣೆ ಸಮಾರಂಭ



ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ನೂತನ ಕಛೇರಿಯನ್ನ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್‌ರವರು, ನಗರ ಗ್ಯಾರಂಟಿ ಯೋಜನೆ ಅಧ್ಯಕ್ಷರಾದ ಜಿ.ಕೃಷ್ಣಪ್ಪರವರು ಉದ್ಘಾಟನೆ ಮಾಡಿದರು.

ಬಿಬಿಎಂಪಿ ಕೇಂದ್ರ ಕಛೇರಿ: ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ನೂತನ ಕಛೇರಿಯ ಲೋಕರ್ಪಣೆ ಸಮಾರಂಭ.

ಕೆಪಿಸಿಸಿ ಅಧ್ಯಕ್ಷರು, ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರು, ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗಾರೆಡ್ಡಿರವರು, ವಿಧಾನಪರಿಷತ್ ವಿರೋಧ ಪಕ್ಷದ ಪಕ್ಷದ ನಾಯಕರಾದ ಬಿ.ಕೆ.ಹರಿಪ್ರಸಾದ್ ರವರು, ವಿಧಾನಪರಿಷತ್ ಸದಸ್ಯರಾದ ಸಲೀಮ್ ಅಹಮದ್ಮ, ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಜಿ.ಕೃಷ್ಣಪ್ಪರವರು, ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು ನೂತನ ಕಛೇರಿಯನ್ನ ಲೋಕರ್ಪಣೆ ಮಾಡಿದರು. ಶಾಸಕರಾದ ಪ್ರಿಯಾಕೃಷ್ಣರವರು, ಮಾಜಿ ಉಪಮಹಾಪೌರರಾದ ಎಲ್.ಶ್ರೀನಿವಾಸ್ ರವರು ಉಪಸ್ಥಿತರಿದ್ದರು.


ಪುಟ 2ಕ್ಕೆ


# ರಾಹುಲ್‌ಗಾಂಧಿ ವಿರುದ್ಧದ ಮಾನ ಹಾನಿ ಪ್ರಕರಣದ ವಿಚಾರಣೆ ಜೂ. 26ಕ್ಕೆ

ಸುಲ್ತಾನ್‌ಪುರ: ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಆಕ್ಷೇಪಾರ್ಹ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್



ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿರುವ ಮಾನನಷ್ಟ ಮೊಕದ್ದಮೆ ಪ್ರಕರಣದ ವಿಚಾರಣೆಯನ್ನು ಕೋರ್ಟ್ ಮಂಗಳವಾರ ಜೂನ್ 26ಕ್ಕೆ ಮುಂದೂಡಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ರಾಹುಲ್


ಪುಟ 2ಕ್ಕೆ


# ಪ್ರಜ್ವಲ್ ರೇವಣ್ಣಗೆ ಜೂನ್ 24ರವರೆಗೆ ನ್ಯಾಯಾಂಗ ಬಂಧನ

ಬೆಂಗಳೂರು: ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯದ ಆರೋಪ ಎದುರಿಸುತ್ತಿರುವ ಜೆಡಿಎಸ್‌ನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ACMM ವಿಶೇಷ ನ್ಯಾಯಾಲಯ ಜೂನ್ 24 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. 42ನೇ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಜೂನ್ 12 ರಂದು ಆತನ ವಿರುದ್ಧದ ಪ್ರಕರಣಗಳ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ಜೂನ್ 18 ರವರೆಗೆ ಅವರನ್ನು ವಶಕ್ಕೆ ನೀಡಿತ್ತು. 33 ವರ್ಷದ ಪ್ರಜ್ವಲ್ ರೇವಣ್ಣ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋತಿದ್ದರು. ಮೇ 31 ರಂದು ಜರ್ಮನಿಯಿಂದ ಬೆಂಗಳೂರು ವಿಮಾನ ನಿಲ್ದಾಣಕ್ಕೆ ಬಂದಿಳಿದ ರೇವಣ್ಣನನ್ನು ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದರು. ಹಾಸನ ಚುನಾವಣೆ ನಡೆದ ಒಂದು ದಿನದ ನಂತರ ಅವರು ಏಪ್ರಿಲ್ 27 ರಂದು ಜರ್ಮನಿಗೆ ತೆರಳಿದ್ದರು. ಕೇಂದ್ರೀಯ ತನಿಖಾ ದಳದ ಮೂಲಕ ಎಸ್‌ಐಟಿ ಕೋರಿಕೆಯ ಮೇರೆಗೆ ಇಂಟರ್‌ಪೋಲ್‌ನಿಂದ ಈ ಹಿಂದೆ ಆತನ ಇರುವಿಕೆಯ ಬಗ್ಗೆ ಮಾಹಿತಿ ಕೋರಿ 'ಬ್ಲೂ ಕಾರ್ನರ್ ನೋಟಿಸ್' ನೀಡಲಾಗಿತ್ತು.





ಮಧುಗಿರಿ– ಮಿಡಿಗೇಶಿ ಹೋಬಳಿ ಚಿನ್ನೇನಹಳ್ಳಿ ಗ್ರಾಮದಲ್ಲಿ ಆದಂತಹ ಘಟನೆಯಿಂದ ಮೃತಪಟ್ಟ ನಿಂಗಮ್ಮನವರ ಮನೆಗೆ ಗೃಹ ಸಚಿವರಾದ ಶ್ರೀ ಡಾ.ಜಿ.ಪರಮೇಶ್ವರ್ ರವರು ಹಾಗೂ ಸಹಕಾರ ಸಚಿವರಾದ ಕೆ ಎನ್ ರಾಜಣ್ಣ ನವರು ಗ್ರಾಮಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ ಗ್ರಾಮದಲ್ಲಿ ಇರುವ ಆರೋಗ್ಯ ಶಿಬಿರಕ್ಕೆ ಭೇಟಿ ನೀಡಿ ವೈದ್ಯರಿಂದ ಹಾಗೂ ಸಾರ್ವಜನಿಕರಿಂದ ಮಾಹಿತಿ ಪಡೆದು ಎಲ್ಲಾ ರೀತಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಅದೇಶಿಸಿ ಸರ್ಕಾರ ಹಾಗೂ ನಾವುಗಳು ಸದಾ ನಿಮ್ಮ ಜೊತೆ ಇರುತ್ತವೆ ಎಂದು ಧೈರ್ಯ ತುಂಬಿದರು.. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಯಾದ ಶ್ರೀ ಶುಭ ಕಲ್ಯಾಣ್ ರವರು, ಜಿಲ್ಲಾ ಪಂಚಾಯಿತಿ ಮುಖ್ಯಾಧಿಕಾರಿಗಳಾದ ಶ್ರೀ ಪ್ರಭುರವರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾದ ಅಶೋಕ್ ರವರು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಮುಖಂಡರುಗಳು ಉಪಸ್ಥಿತರಿದ್ದರು.

# ದರ್ಶನ್ ಬಂಧನದ ಬಗ್ಗೆ ನಟಿ ರಚಿತಾ ರಾಮ್ ಪ್ರತಿಕ್ರಿಯೆ

ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನವಾಗಿ ವಾರವಾಗಿದೆ. ಈಗ ನಿಧಾನಕ್ಕೆ ಚಿತ್ರರಂಗದ ಗಣ್ಯರು ಒಬ್ಬೊಬ್ಬರಾಗಿ ಕೊಲೆ ಪ್ರಕರಣದ ಬಗ್ಗೆ ತಮ್ಮ ಅಭಿಪ್ರಾಯ ಹಂಚಿಕೊಳ್ಳಲು ಪ್ರಾರಂಭಿಸಿದ್ದಾರೆ. ದರ್ಶನ್ ವಿಷಯವಾಗಿ ಮಾತನಾಡಿರುವ ರಚಿತಾ ರಾಮ್, 'ನನ್ನನ್ನು ಚಿತ್ರರಂಗಕ್ಕೆ ಪರಿಚಯಿಸಿದ ನಟ ದರ್ಶನ್ ಸರ್. ದರ್ಶನ್ ನನಗೆ ಗುರು ಸಮಾನರು, ನನ್ನ ಜೀವನದ ತಪ್ಪುಗಳನ್ನು ತಿದ್ದಿ ಮಾರ್ಗದರ್ಶನ ನೀಡಿದಂತಹ ವ್ಯಕ್ತಿ. ಇಂತಹ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನುವುದು ನಂಬಲು ಸ್ವಲ್ಪ ಕಷ್ಟವಾಗುತ್ತಿದೆ. ಏನಿದ್ದರೂ ಸತ್ಯ ಪೊಲೀಸ್ ತನಿಖೆಯಿಂದ ನಮ್ಮ ಮುಂದೆ ಬರಲಿದೆ ಎನ್ನುವುದೇ ನನ್ನ ನಂಬಿಕೆ. ನನ್ನ ಮಾಧ್ಯಮ ಮಿತ್ರರು ಈ ಕೇಸ್‌ನ ವರದಿಯಲ್ಲಿ ಪಾರದರ್ಶಕವಾಗಿರುತ್ತಿರಿ ಮತ್ತು ನಿಷ್ಪಕ್ಷವಾಗಿ ಕೆಲಸ ಮಾಡುತ್ತಿರಿ ಎಂದು ಆಶಿಸುತ್ತೇನೆ' ಎಂದು ರಚಿತಾ ರಾಮ್ ಹೇಳಿದ್ದಾರೆ.




ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...
www.munjanevarthe.com
ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 19 ಜೂನ್ 2024
WEDNESDAY 19 June 2024

# ದೇವದಾರಿ ಗಣಿಗಾರಿಕೆ ಯೋಜನೆ

ಬೆಂಗಳೂರು : ಬಳ್ಳಾರಿಯ ಸಂಡೂರು ವ್ಯಾಪ್ತಿಯ ದೇವದಾರಿ ಪ್ರದೇಶದಲ್ಲಿ ಕುದುರೆಮುಖ ಕಬ್ಬಿಣ ಅದಿರು ಕಂಪನಿ (ಏಖಔಅಐ) ಕೈಗೆತ್ತಿಕೊಂಡಿರುವ ಗಣಿಗಾರಿಕೆ ಯೋಜನೆಯ ಬಗ್ಗೆ ಕಳವಳ ಬೇಡ ಎಂದು ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್. ಡಿ ಕುಮಾರಸ್ವಾಮಿ ಅವರು ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ಕೋರಮಂಗಲದಲ್ಲಿರುವ ಕೆಐಒಸಿಎಲ್ ಕಚೇರಿಯಲ್ಲಿ ಮಂಗಳವಾರ ಕುದುರೆಮುಖ ಕಬ್ಬಿಣ ಅದಿರು ಕಂಪನಿಯ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಗಂಟಿ ವೆಂಕಟ ಕಿರಣ್ ಅವರು ಸೇರಿದಂತೆ ಇನ್ನೂ ಹಲವು ಉನ್ನತಾಧಿಕಾರಿಗಳ ಜತೆ ಸಭೆ ನಡೆಸಿದ ನಂತರ ಅವರು ಮಾಧ್ಯಮಗಳ ಜತೆ ಮಾತನಾಡಿದರು.

ಮೋದಿ ಅವರ ಕನಸು ನನಸು : ಅರಣ್ಯ ನಾಶಕ್ಕೆ ನಾನು ಸಹಿ ಹಾಕಿದ್ದಲ್ಲ. ರಾಜ್ಯದಲ್ಲಿ ಉಕ್ಕು ಉತ್ಪಾದನೆ ಆಗಬೇಕು ಹಾಗೂ ಹೆಚ್ಚೆಚ್ಚು ಉದ್ಯೋಗ ಸೃಷ್ಟಿಯಾಗಿ ನಮ್ಮ ಯುವಕರಿಗೆ ಉದ್ಯೋಗ ದೊರೆಯಬೇಕು. ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮನಿರ್ಭರ ಭಾರತದ ಆಶಯದಂತೆ ಜಿಡಿಪಿ ವೃದ್ಧಿಗೆ ಹೆಚ್ಚು ಕಾಣಿಕೆ ನೀಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಅರಣ್ಯ ಉಳಿಸಲು ಕ್ರಮ ವಹಿಸಲಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು.

ಅರಣ್ಯ ನಾಶದ ಆತಂಕ ಬೇಡ : ದೇವದಾರಿ ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ಎಂದು ಪ್ರಚಾರ ಮಾಡಲಾಗುತ್ತಿದೆ. ಜನರಲ್ಲಿ ಸ್ವಲ್ಪ ಮಟ್ಟಿಗಿನ ಆತಂಕ




ಉಂಟಾಗುವ ರೀತಿಯಲ್ಲಿ ಪ್ರಚಾರವಾಗಿದೆ. 2019ರಲ್ಲಿ ರಾಜ್ಯ ಸರ್ಕಾರವೇ ದೇವದಾರಿ ಗಣಿಗಾರಿಕೆ ಯೋಜನೆಗೆ 404 ಹೆಕ್ಟೇರ್ ಪ್ರದೇಶದಲ್ಲಿ ಅನುಮತಿ ಕೊಟ್ಟಿದೆ. ನಂತರ ಕೇಂದ್ರ ಸರ್ಕಾರದ ಪರಿಸರ ಇಲಾಖೆ ಕೂಡ ಅನುಮತಿ ನೀಡಿದೆ. ಆದರೆ, ಕುಮಾರಸ್ವಾಮಿ ಅವರು ಗಣಿಗಾರಿಕೆಗೆ ಅನುಮತಿ ನೀಡುವ ಯೋಜನೆಗೆ ಸಹಿ ಹಾಕಿದ್ದಾರೆ. ದೇವದಾರಿ ಭಾಗದಲ್ಲಿ ಅರಣ್ಯ ಮತ್ತು ಜೀವರಾಶಿಗಳಿಗೆ ಹಾನಿ ಆಗುತ್ತದೆ. 99 ಸಾವಿರ ಮರಗಳಿಗೆ ಧಕ್ಕೆ ಆಗುತ್ತದೆ ಎಂದು ವರದಿಗಳು ಬಂದಿವೆ. ಆದರೆ, ಅರಣ್ಯ ನಾಶದ ಬಗ್ಗೆ ಆತಂಕ ಬೇಡ ಎಂದು ಕೇಂದ್ರ ಸಚಿವರು ಹೇಳಿದರು.

ಗಿಡವೊಂದಕ್ಕೆ ನೀರು ಹಾಕುತ್ತಿರುವ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ

ಕುದುರೆಮುಖ ಕಂಪನಿ ಅದಿರು ತೆಗೆಯುವ ಕೆಲಸ ಪ್ರಾರಂಭ ಮಾಡುವ ಮುನ್ನವೇ ಸುಮಾರು 194 ಕೋಟಿ ರೂಪಾಯಿ ವೆಚ್ಚದಲ್ಲಿ 808 ಹೆಕ್ಟೇರ್ ಪ್ರದೇಶದಲ್ಲಿ ಪರ್ಯಾಯವಾಗಿ ಅರಣ್ಯ ಬೆಳೆಸಲಿದೆ. ಅದಕ್ಕಾಗಿ ಅರಣ್ಯ ಇಲಾಖೆಗೆ ಹಣ ಪಾವತಿಸಿದೆ. ಜೀವರಾಶಿಗೆ ತೊಂದರೆಯಾಗದ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. ಈ ವಿಷಯವನ್ನು ಆ ಭಾಗದ ಜನತೆ ಗಮನಿಸಬೇಕು ಎಂದು ಹೆಚ್?ಡಿಕೆ ಮನವಿ ಮಾಡಿದರು.

ಇದಕ್ಕೂ ಮೊದಲು ಅಧಿಕಾರಿಗಳ ಜತೆ ಸಭೆ ನಡೆಸಿದ ಕುಮಾರಸ್ವಾಮಿ ಅವರು, ಕುದುರೆಮುಖ ಕಂಪನಿಯ ಕಾರ್ಯ ಚಟುವಟಿಕೆಗಳ ಬಗ್ಗೆ ಸಮಗ್ರ ಮಾಹಿತಿ ಪಡೆದುಕೊಂಡರು.

ಕಂಪನಿಯ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಗಂಟಿ ವೆಂಕಟ ಕಿರಣ್ ಅವರು ನೀಡಿದ ಕಂಪನಿಯ ಪ್ರಾತ್ಯಕ್ಷಿಕೆಯನ್ನು ವೀಕ್ಷಿಸಿ, ಉಕ್ಕು ಉತ್ಪಾದನೆ, ರಫ್ತು ಬಗ್ಗೆ ವ್ಯಾಪಕ ಚರ್ಚೆ ನಡೆಸಿದರು. ದೇವದಾರಿ ಯೋಜನೆ ಪ್ರಧಾನಿಯವರ ನೂರು ದಿನದ ಕಾರ್ಯಸೂಚಿಯಲ್ಲಿ ಇದ್ದು, ಈ ಬಗ್ಗೆ ಮುತುವರ್ಜಿಯಿಂದ ಕೆಲಸ ಮಾಡಬೇಕು ಎಂದು ಸೂಚಿಸಿದರು. ಆದಷ್ಟು ಬೇಗ ಗಣಿಗಾರಿಕೆ ಆರಂಭ ಮಾಡಿ ಎಂದು ಹೇಳಿದರು.

ವಿಶ್ವೇಶ್ವರಯ್ಯ ಕಬ್ಬಿಣ ಅದಿರು ಕಾರ್ಖಾನೆ ಬಗ್ಗೆ ಚರ್ಚೆ : ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಅದಿರು ಕಾರ್ಖಾನೆ ಪುನಶ್ಚೇತನ ಬಗ್ಗೆ ಕೂಡ ಸಭೆಯಲ್ಲಿ ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರು ಚರ್ಚೆ ನಡೆಸಿದರು. ಈ ಬಗ್ಗೆ ಆಲೋಚನೆ ಮಾಡಿ ಎಂದು ಅಧಿಕಾರಿಗಳಿಗೆ ಸೂಚಿಸಿದ ಕೇಂದ್ರ ಸಚಿವರು, ಇದು ಒಳ್ಳೆಯ ಕಾರ್ಖಾನೆ, ಕರ್ನಾಟಕದ ಹೆಗ್ಗುರುತು ಆಗಿತ್ತು. ಅದನ್ನು ಉಳಿಸುವ ಬಗ್ಗೆ ಚಿಂತನೆ ಮಾಡಿ ಎಂದರು.

Specialty ಸ್ಟೀಲ್ ಉತ್ಪಾದನೆಗೆ ಒತ್ತು ಕೊಡಿ : Specialty ಸ್ಟೀಲ್ (ಮೌಲ್ಯಾಧಾರಿತ ಉಕ್ಕು) ಅನ್ನು ಹೆಚ್ಚು ಉತ್ಪಾದನೆ ಮಾಡುವ ಕಡೆ ಹೆಚ್ಚು ಗಮನ ಹರಿಸಿ.

ಜಾಗತಿಕವಾಗಿ ಅದರಲ್ಲಿಯೂ ಚೀನಾ, ತೈವಾನ್, ದಕ್ಷಿಣ ಕೊರಿಯಾ ಪೈಪೋಟಿ ಎದುರಿಸಲು ಖಿಠಿಜ–ಛಿಚಿಟಣಥಿ ಸ್ಟೀಲ್ ಉತ್ಪಾದನೆ ಕಡೆ ಹೆಚ್ಚು ಗಮನ ಕೊಡಿ. Specialty ಸ್ಟೀಲ್ ಉತ್ಪಾದನೆಗೆ ಅಗತ್ಯವಾದ ತಂತ್ರಜ್ಞಾನ ಜೋಡಿಸಿಕೊಳ್ಳಿ ಎಂದು ಸಚಿವರು ನಿರ್ದೇಶನ ನೀಡಿದರು.

ಕೆಐಒಸಿಎಲ್ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಹೆಚ್?ಡಿಕೆ (ETV Bharat)

ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಮುನ್ನಡೆ ; ಮೋದಿ ಕನಸು : ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಸ್ವಾವಲಂಬನೆ ಸಾಧಿಸುವುದು ಪ್ರಧಾನಿ ನರೇಂದ್ರ ಮೋದಿ ಅವರ ಕನಸು ಎಂದು ಕೇಂದ್ರ ಸಚಿವರು ಇದೇ ವೇಳೆ ತಿಳಿಸಿದರು.

ರಾಜ್ಯ ಕೈಗಾರಿಕೆ ಸಚಿವ ಎಂ. ಬಿ ಪಾಟೀಲ್ ಅವರು ನೀಡಿರುವ ಯೂ ಟರ್ನ್ ಹೇಳಿಕೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಹೆಚ್ ಡಿಕೆ, ದೇಶದಲ್ಲಿ ಸೆಮಿಕಂಡಕ್ಟರ್ ಕೈಗಾರಿಕೆ ದೊಡ್ಡ ಪ್ರಮಾಣದಲ್ಲಿ ಬೆಳೆಯಬೇಕಿದೆ. ತೈವಾನ್, ಅಮೆರಿಕದಲ್ಲಿ ಈ ಉದ್ಯಮ ದೊಡ್ಡಮಟ್ಟದಲ್ಲಿದೆ. ಅದಕ್ಕೆ ಮೋದಿಯವರು ಪ್ರೋತ್ಸಾಹ ನೀಡಲು ಒಂದು ಬೃಹತ್ ಯೋಜನೆ ಜಾರಿಗೆ ತಂದಿದ್ದಾರೆ. ಇದರಲ್ಲಿ ಯೂಟರ್ನ್ ಪ್ರಶ್ನೆ ಏನೂ ಇಲ್ಲ. ದೇಶದ ಪ್ರಗತಿಯಷ್ಟೇ ಮುಖ್ಯ ಎಂದರು.

# ನನ್ನ ಕ್ಷೇತ್ರದಲ್ಲಿ ಅವೈಜ್ಞಾನಿಕ ಕಾಮಗಾರಿಗೆ ಅವಕಾಶವಿಲ್ಲ



ಕೆ. ಆರ್.ಪೇಟೆ: ನನ್ನ ಕ್ಷೇತ್ರದಲ್ಲಿ ಅವೈಜ್ಞಾನಿಕ ಕಾಮಗಾರಿಗೆ ಅವಕಾಶವಿಲ್ಲ ಎಂದು ಶಾಸಕ ಹೆಚ್.ಟಿ ಮಂಜುರವರು ಲೋಕೋಪಯೋಗಿ ಇಲಾಖೆ ಸಹಾಯಕ ಕಿರಿಯ ಎಂಜಿನಿಯರ್ ಶಿವಕುಮಾರ್ ಗೆ ತರಾಟೆಗೆ ತೆಗೆದುಕೊಂಡರು.

ತಾಲ್ಲೂಕಿನ ಶೀಳನೆರೆ ಹೋಬಳಿಯ ಹರಳಹಳ್ಳಿ ಗ್ರಾಮದ ನಡೆಯುತ್ತಿರುವ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಒಳ ಚರಂಡಿ ಮತ್ತು ರಸ್ತೆ ಕಾಮಗಾರಿ ಸಂಪೂರ್ಣ ಕಳಪೆ ಮತ್ತು ಅವೈಜ್ಞಾನಿಕದಿಂದ ಕೂಡಿದೆ ಎಂದು ಗ್ರಾಮಸ್ಥರು ಆರೋಪಸಿದ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಸ್ಥಳ ಪರಿಶೀಲನೆ ನಡೆಸಿ ಮಾತನಾಡಿದರು.

ಕ್ಷೇತ್ರದ ಅಭಿವೃದ್ಧಿ ಕಾಯುವ ಕಾಯಕ ನನ್ನದಾದರೂ ನಿಮ್ಮಂತಹ ಬೇಜವಾಬ್ದಾರಿ ಅಧಿಕಾರಿಗಳಿಂದ ನನ್ನ ಹುಟ್ಟೂರಿನಲ್ಲೆ ಅವೈಜ್ಞಾನಿಕ ಕಾಮಗಾರಿಗಳಿಂದ ನಾನು ತಲೆತಗ್ಗಿಸುವಂಥಾಗುತ್ತಿದೆ. ಎಂದು ಲೋಕೋಪಯೋಗಿ ಇಲಾಖೆಯ ಸಹಾಯಕ ಕಿರಿಯ ಇಂಜಿನಿಯರ್ ಶಿವಕುಮಾರ್ ತರಾಟೆಗೆ ತೆಗೆದುಕೊಂಡು.ಇಂತಹ ಕಾಮಗಾರಿಗೆ ಅವಕಾಶ ನೀಡುತ್ತಾ ಸಾರ್ವಜನಿಕರ ಜೀವದ ಜೊತೆ ಚೆಲ್ಲಾಟವಾಡುವ ಶಾಸಕ ನಾನಲ್ಲ ಶೀಘ್ರವೇ ಅವೈಜ್ಞಾನಿಕ ಕಾಮಗಾರಿಯನ್ನು ಸರಿಪಡಿಸಿ ಸಾರ್ವಜನಿಕರಿಗೆ ಸದ್ಬಳಕೆ ಆಗುವ ರೀತಿಯಲ್ಲಿ ಗುಣಮಟ್ಟದ ಕಾಮಗಾರಿ ಕೈಗೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಜು, ಸಹಾಯಕ ಕಾರ್ಯಪಾಲಕ ಮಂಜುನಾಥ್,ಗ್ರಾಮದ ಹಿರಿಯ ಮುಖಂಡ ಕೃಷ್ಣಪ್ಪ, ವಿಜಯೇಂದ್ರ , ಶಾಸಕ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್, ಸೇರಿದಂತೆ ಉಪಸ್ಥಿತರಿದ್ದರು.

# ಕಲ್ಲು ಗಣಿಗಾರಿಕೆಗೆ ಕೊನೆಯಿಲ್ಲವೇ?

ಮಾಲೂರು: ತಾಲ್ಲೂಕಿನ ಟೇಕಲ್‌ನ ಹಳೇಪಾಳ್ಯ ಗ್ರಾಮದ ಭೂತಮ್ಮ ಬೆಟ್ಟಕ್ಕೆ ಹೊಂದಿಕೊಂಡಿರುವ ಸರ್ವೆ ನಂ.53 ರಲ್ಲಿ ಮಂಗಳವಾರ ಮುಂಜಾನೆ ಕಲ್ಲು ಬಂಡೆಯನ್ನು ಸೀಳುವ ಸಂದರ್ಭದಲ್ಲಿ ಬೃಹತ್ ಬಂಡೆಯ ಕೆಲವು ಭಾಗಗಳು ಕೆಳಭಾಗಕ್ಕೆ ಉರುಳಿದ್ದರಿಂದ ಅದೇ ಬಂಡೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಇಟಾಚಿ ಮತ್ತು ಕಂಪ್ರೇಜರ್ ಮೇಲೆ ಕಲ್ಲು ಬಂಡೆ ಉರುಳಿದ್ದರಿಂದ ಕೂಲಿ ಕಾರ್ಮಿಕರು ಇಟಾಚಿ ಆಪರೇಟರ್ ಬಂಗಾರಪೇಟೆ ತಾಲ್ಲೂಕು ಕ್ಯಾಸಂಬಳ್ಳಿ ಗ್ರಾಮದ ಪ್ರವೀಣ್ (32) ಎಂಬಾತ ಸ್ಥಳದಲ್ಲಿ ಮೃತ ಪಟ್ಟಿರಬಹುದೆಂದು ಹಾಗೂ ಕಂಪ್ರೇಜರ್‌ನಲ್ಲಿ ಕೆಲಸ ಮಾಡುತ್ತಿದ್ದ ಇನ್ನಿತರರು ಬಂಡೆ ಕಳೆಗೆ ಸಿಲುಕಿ ಮೃತಪಟ್ಟಿರಬಹುದೆಂದು ಶಂಕಿಸಲಾಗಿದೆ. ಟೇಕಲ್ ವ್ಯಾಪ್ತಿಯ ಕೆ.ಜಿ.ಹಳ್ಳಿ ಗ್ರಾ.ಪಂ.ನ ಹಳೇಪಾಳ್ಯ ಗ್ರಾಮಕ್ಕೆ ಸೇರಿದ ಸರ್ವೆ ನಂ.53ರ ಸರ್ಕಾರಿ ಗೋಮಾಳ ಎಂದು ಗುರುತಿಸಿದ್ದು ಅಲ್ಲಿ ಅದೇ ಗ್ರಾಮದ ಮಂಜುನಾಥ ಎಂಬುವರು ಕಲ್ಲು ಗಣಿಗಾರಿಕೆ ಮಾಡುತ್ತಿದ್ದರು. ಅದರಂತೆಯೇ ಮಂಗಳವಾರ ಅಲ್ಲಿ ಬೃಹತ್ ಬಂಡೆ ಸಮೀಪ ಬಂಡೆಯನ್ನು ಇಬ್ಭಾಗ ಮಾಡುತ್ತಿದ್ದಾಗ ಈ ದುರಂತ ನಡೆದಿದೆ. ಈ ಸುತ್ತಮುತ್ತಲು ಪ್ರದೇಶದಲ್ಲಿ ಅನೇಕ ವರ್ಷಗಳಿಂದ ಗಣಿಗಾರಿಕೆ ನಡೆಯುತ್ತಿದ್ದು ಬಂಡೆಗಳನ್ನು ಸ್ಫೋಟಿಸುವಾಗ ಹಲವಾರು ಸಾವು ನೋವುಗಳು ಸಂಭವಿಸಿದೆ. ಈ ಬಗ್ಗೆ ಪೋಲಿಸರು ಸಂಬಂಧಪಟ್ಟ ಗಣಿ ಇಲಾಖೆಯಾಗಲಿ ಕಲ್ಲು ಕುಟಿಕರಿಗೂ ಹಾಗೂ ಸುತ್ತಮುತ್ತಲು ಕಲ್ಲು ಕೆಲಸ ಮಾಡುವ ಕಾರ್ಮಿಕರಿಗೆ ಸೂಕ್ತವಾದ ಮಾರ್ಗದರ್ಶನ ನೀಡಿಲ್ಲ. ಈ ಭಾಗದಲ್ಲಿ ಸಾವಿರಾರು ಮಂದಿ ಕಲ್ಲು ಗಣಿಗಾರಿಕೆಯಿಂದ ಜೀವನ ನಡೆಸುತ್ತಿದ್ದಾರೆ ಇವರಿಗೆ ಯಾವುದೇ ರೀತಿಯಾದ ಕಾನೂನು ರೀತಿ ಅನುಕೂಲ ಕಲ್ಪಿಸಿಲ್ಲ ಮತ್ತು ಇಲ್ಲಿಂದ ಕಲ್ಲು ಸರಬರಾಜು ಮಾಡುವರಿಂದ ತೆರಿಗೆ ಸಂಗ್ರಹವಾಗುತ್ತಿದೆಯೆ ಇಲ್ಲಿ ಎಂಬುದು ಸರ್ಕಾರವೇ ಮಾಹಿತಿ ನೀಡಬೇಕು. ಒಂದು ವೇಳೆ ತೆರಿಗೆ ಪಾವತಿಸದಿದ್ದರೆ ಅಂತಹವರನ್ನು ಪತ್ತೆ ಹಚ್ಚಿ ಸರ್ಕಾರಕ್ಕೆ ವರಮಾನ ಬರುವಂತೆ ರೂಪುರೇಷೆಗಳನ್ನು ತಯಾರಿಸಿ ವರದಿ ನೀಡಿದರೆ ಕಾರ್ಮಿಕರಿಗೆ ಅನುಕೂಲವಾಗುತ್ತದೆ ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

ಗಣಿ ಇಲಾಖೆ ನಿರ್ಲಕ್ಷ್ಯ: ಕೋಲಾರ ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆ



ಅಧಿಕಾರಿಗಳು ಇಂತಹ ದುರ್ಘಟನೆಗಳು ನಡೆದಾಗ ಮಾತ್ರ ಇದರ ಬಗ್ಗೆ ಕಾಳಜಿವಹಿಸುತ್ತಾರೆ. ನಂತರ ಇದನ್ನು ಮರೆಯುತ್ತಾರೆ ಕೆಲವು ತಿಂಗಳುಗಳ ಹಿಂದೆ ತೆರಿಗೆ ಕಟ್ಟಿಲ್ಲ ಎಂಬ ಮಾಹಿತಿ ಹಾಗೂ ಅಕ್ರಮ ಗಣಿಗಾರಿಕೆ ಅರಿತು. ಸರ್ವೆ ಮಾಡಿಸಲಾಗಿತ್ತು. ಈ ಬಗ್ಗೆ ಅರಣ್ಯ ಇಲಾಖೆ ವ್ಯಾಪ್ತಿಗೆ ಸೇರಿದ ಜಮೀನುಗಳಲ್ಲಿಯು ಸಹ ಗಣಿಗಾರಿಕೆ ನಡೆಯುತ್ತಿದೆ ಈ ಬಗ್ಗೆ ಜಿಲ್ಲಾಡಳಿತ ಕಣ್ಣುಮುಚ್ಚಿ ಕುಳಿತಿದೇಯಾ ಎಂಬುದು ಯಕ್ಷ ಪ್ರಶ್ನೆಯಾಗಿದೆ. ಈ ಸಂದರ್ಭದಲ್ಲಿ ಸ್ಥಳಕ್ಕೆ ಕೋಲಾರದ ಎಸ್.ಪಿ.ನಾರಾಯಣ್ ಬೇಟಿ ನೀಡಿ ವೀಕ್ಷಿಸಿ ಮಾತನಾಡಿ ಸ್ಥಳ ಹಳೇಪಾಳ್ಯ ಮಂಜುನಾಥ ಎಂಬುವರಿಗೆ ಗುತ್ತಿಗೆ ಪಡೆದು ಕಲ್ಲು ಬಂಡೆ ಕೆಲಸ ಮಾಡುತ್ತಿದ್ದಾರೆಂದು ಮೇಲು ನೋಟಕ್ಕೆ ತಿಳಿದುಬಂದಿದ್ದು ಈ ಸ್ಥಳಕ್ಕೆ ಅರಣ್ಯ ಇಲಾಖೆಗೆ ಅಥವಾ ಕಂದಾಯ ಇಲಾಖೆಗೆ ಸೇರಿದೆ ಎಂಬುದು ಖಚಿತ ಮಾಹಿತಿ ಇಲ್ಲ ನಿನ್ನೆ ರಾತ್ರಿ ಮಳೆ ಬಂದಿದ್ದರಿಂದ ಈ ಭಾಗದಲ್ಲಿ ನೆಲ ಕುಸಿದಿತ್ತು. ಇದರಿಂದ ಈ ಘಟನೆ ನಡೆದಿರಬಹುದೆಂದು ವೀಕ್ಷಿಸಿದರು. ಈ ಸ್ಥಳದಲ್ಲಿ ಇಟಾಚಿ ಆಪರೇಟರ್ ಸಾವನ್ನಪ್ಪಿರುವುದು ಕಂಡು ಬಂದಿದ್ದು ಇನ್ನೂ ಕೆಲವರು ಸಿಲುಕಿರಬಹುದೆಂದು ಶಂಕಿಸ ಲಾಗಿದೆ. ಈ ಹಿಂದೆಯೂ ಇಲ್ಲಿ ಇಂತಹ ಘಟನೆಗಳು ನಡೆದಿದ್ದು ಸಾವು ನೋವುಗಳು ಸಂಭವಿಸಿವೆ ಎಂದು ಮಾಹಿತಿ ಇದೆ. ಸ್ಥಳೀಯರ ಸಹಕಾರ ಹಾಗೂ ಇದರ ಕಾರ್ಯಾಚರಣೆಯನ್ನು ಎನ್‌ಡಿಆರ್‌ಎಫ್‌ಗೆ ವಹಿಸಲಾಗುವುದು. ಬೃಹತ್ ಯತ್ರೋಪಕರಣಗಳನ್ನು ಬಳಸುವುದು ಕಾನೂನು ಬಾಹಿರವಾಗಿದ್ದು ಸಾಂಪ್ರದಾಯಿಕ ಕಲ್ಲು ಕುಟಿಕರ ಕೆಲಸ ಮಾತ್ರ ತಾತ್ಕಾಲಿಕವಾಗಿ ಅನುಮತಿ ನೀಡಿದ್ದು ಆದರೆ ಇಲ್ಲಿ ಕಾನೂನು ಬಾಹಿರವಾಗಿ ನಿರಂತರವಾಗಿ ಕೆಲಸ ನಡೆಯುತ್ತಿರುವುದು ಕಂಡು ಬಂದಿದೆ. ಈ ನಿಟ್ಟಿನಲ್ಲಿ ಗುತ್ತಿಗೆದಾರನ ಮೇಲೆ ಮಾಸ್ತಿ ಪೋಲಿಸ್ ಠಾಣೆಯಲ್ಲಿ ಕೇಸು ದಾಖಲಿಸಲಾಗುವುದು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಈ ಬಗ್ಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಈ ಸಂದರ್ಭದಲ್ಲಿ ಮಾಸ್ತಿ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಸುನಿಲ್‌ಕುಮಾರ್, ಟೇಕಲ್ ನಾಡಕಛೇರಿಯ ಆರ್‌ಐ ನಾರಾಯಣಸ್ವಾಮಿ, ಇತರೆ ಇಲಾಖೆಗಳವರು ಸ್ಥಳಕ್ಕೆ ಬೇಟಿ ನೀಡಿದರು.

# ನೂತನ ಕಛೇರಿಯ ಲೋಕರ್ಪಣೆ ಸಮಾರಂಭ

ಪುಟ 1ರಿಂದ

ಇದೇ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ರವರು ಮಾತನಾಡಿ ಗ್ಯಾರಂಟಿ ಯೋಜನೆಗಳು ದುರ್ಬಲರಿಗೆ ಆರ್ಥಿಕವಾಗಿ ಶಕ್ತಿ ತುಂಬಿದೆ. ಗ್ಯಾರಂಟಿ ಯೋಜನೆಗಳ ಸಮಿತಿಯನ್ನು ರಾಜ್ಯ ಮಟ್ಟದಲ್ಲಿ ಜಾರಿಗೆ ತಂದಿದೆ. ಗ್ಯಾರಂಟಿ ಯೋಜನೆ ಜಿಲ್ಲಾ ಮಟ್ಟದ ಅಧ್ಯಕ್ಷರಿಗೆ 50ಸಾವಿರ ಮತ್ತು ತಾಲೂಕು ಮಟ್ಟದ ಅಧ್ಯಕ್ಷರಿಗೆ 25ಸಾವಿರ ರೂಪಾಯಿ ವೇತನ ನೀಡಲಾಗುತ್ತಿದೆ. ಜಿಲ್ಲೆ , ತಾಲೂಕು ಮತ್ತು ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಗ್ಯಾರಂಟಿ ಯೋಜನೆ ಸಮಿತಿಯ ಕಛೇರಿ ತೆರಯಲಾಗುತ್ತದೆ. ಖಾಲಿ ಇರುವ ಗ್ಯಾರಂಟಿ ಯೋಜನೆ ಸಮಿತಿಗೆ ಭರ್ತಿ ಮಾಡಲಾಗುತ್ತದೆ. ಗ್ಯಾರಂಟಿ ಯೋಜನೆಗಳ ಪರಿಶೀಲನೆ ಮತ್ತು ಸಮರ್ಪಕವಾಗಿ ತಲುಪಿದಿಯ ಎಂಬ ಪರಿಶೀಲನೆ ಜವಾಬ್ದಾರಿ ಹೊಂದಿದೆ. ಜಿ.ಕೃಷ್ಣಪ್ಪ ರವರು ಮಾತನಾಡಿ ಕೆಪಿಸಿಸಿ ಅಧ್ಯಕ್ಷರು, ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರು ಮತ್ತು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರ ನೇತೃತ್ವದಲ್ಲಿ ಚುನಾವಣೆ ಪೂರ್ವದಲ್ಲಿ ನೀಡಿದ 5 ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿಗೆ ತಂದಿದೆ. ರಾಜ್ಯದ ಪ್ರತಿ ಕುಟುಂಬವು ಗ್ಯಾರಂಟಿ ಯೋಜನೆಯ ಲಾಭ ತಲುಪಿದೆ. ಅನ್ನಭಾಗ್ಯ ಮತ್ತು 200ಯೂನಿಟ್ ವಿದ್ಯುತ್ ಉಚಿತ, ಮನೆಯ ಯಾಜಮಾನಿಗೆ 2000ರೂ ಸಹಾಯಧನ, ಶಕ್ತಿ ಯೋಜನೆ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ, ಯುವ ನಿಧಿ ಯೋಜನೆಗಳು ಬಡವರ ಮತ್ತು ಮಧ್ಯಮ ವರ್ಗದ ಕುಟುಂಬದವರಿಗೆ ಆರ್ಥಿಕವಾಗಿ ಶಕ್ತಿ ತುಂಬಿದೆ. ಬೆಂಗಳೂರುನಗರ ಪ್ರದೇಶದಲ್ಲಿ 28ವಿಧಾನಸಭಾ ಕ್ಷೇತ್ರದಲ್ಲಿ ಅಧ್ಯಕ್ಷರನ್ನ ನೇಮಕ ಮಾಡಲಾಗಿದೆ. ಗ್ಯಾರಂಟಿ ಯೋಜನೆ ಅರ್ಹ ಫಲಾನುಭವಿಗಳನ್ನು ಭೇಟಿ ಮಾಡಿ ಕಾಂಗ್ರೆಸ್ ಪಕ್ಷದ ಕೊಡುಗೆಯನ್ನ ತಿಳಿಸಲಾಗುತ್ತದೆ. ಕಾಂಗ್ರೆಸ್ ಪಕ್ಷ ಬಡವರ ಪರ ಧ್ವನಿಯಾಗಿ ಅವರ ಜೀವನವನ್ನು ಕೈಹಿಡಿಯವ ಕೆಲಸ ಮಾಡುತ್ತಿದೆ ಎಂದು ಹೇಳಿದರು. ಮಾಜಿ ಮಹಾನಗರ ಪಾಲಿಕೆ ಸದಸ್ಯರುಗಳು, ಗ್ಯಾರಂಟಿ ಯೋಜನೆಗಳ ಅಧ್ಯಕ್ಷರು, ಸದಸ್ಯರು ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ಆನ್‌ಲೈನ್‌ನಲ್ಲಿ ಹಣ ಹೂಡಿಕೆ, ಉಪನ್ಯಾಸಕನಿಗೆ 20 ಲಕ್ಷ ವಂಚಿಸಿದ ಸೈಬರ್ ಖದೀಮರು

ದಾವಣಗೆರೆ: ಆನ್‌ಲೈನ್‌ನಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಕೊಡಿಸುವುದಾಗಿ ನಂಬಿಸಿ ಉಪನ್ಯಾಸಕನಿಗೆ 20 ಲಕ್ಷ ರೂಪಾಯಿ ವಂಚಿಸಿದ ಘಟನೆ ದಾವಣಗೆರೆ ನಗರದ ನಿಟ್ಟುವಳ್ಳಿ ಹೊಸ ಬಡಾವಣೆಯಲ್ಲಿ ನಡೆದಿದೆ. ಇಲ್ಲಿನ ನಿವಾಸಿಯಾದ ಉಪನ್ಯಾಸಕ ಮಾರ್ಚ್ 24 ರಿಂದ ಮೇ 31ರ ವರೆಗೆ ಬರೋಬ್ಬರಿ 20,10,014 ಲಕ್ಷ ರೂ. ಗಳನ್ನು ಆನ್‌ಲೈನ್ ವಂಚಕರಿಗೆ ಪಾವತಿಸಿ ಮೋಸ ಹೋಗಿದ್ದಾರೆ. ಈ ಸಂಬಂಧ ವಂಚನೆಗೊಳಗಾದ ಉಪನ್ಯಾಸಕ ಸಿಇಎನ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪ್ರಕರಣದ ಹಿನ್ನೆಲೆ: "ಉಪನ್ಯಾಸಕ ತಮ್ಮ ಇನ್‌ಸ್ಟಾಗ್ರಾಂ ನೋಡುತ್ತಿರುವಾಗ ಗೋಲ್ಡ್‌ಮನ್ ಸ್ಯಾಕ್ಸ್ ಬ್ಯುಸಿನೆಸ್ ಸ್ಕೂಲ್ ಎಂಬ ಜಾಹೀರಾತು ಕಣಿಸಿದೆ. ಅವರು ಅದರ ಲಿಂಕ್ ಕ್ಲಿಕ್ ಮಾಡಿದ ತಕ್ಷಣವೇ ವಾಟ್ಸ್‌ಆಯಪ್ ಗುಂಪಿಗೆ ನಂಬರ್ ಸೇರ್ಪಡೆಯಾಗಿದೆ. ಆ ವ್ಯಾಟ್ಸ್?ಆ?ಯಪ್? ಗುಂಪಿನಲ್ಲಿ ಆನ್‌ಲೈನ್?ನಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಕೊಡಿಸುವ ಸಂದೇಶ ಬಂದಿದೆ. ಇದನ್ನು ನಂಬಿದ ಉಪನ್ಯಾಸಕ ಮೊದಲು 20 ಸಾವಿರ ರೂ. ಪ್ರವೇಶ ಶುಲ್ಕ ಪಾವತಿಸಿದ್ದಾರೆ. ಬಳಿಕ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಿದ್ದಾರೆ." "ಬಳಿಕ ವಾಟ್ಸ್‌ಆಯಪ್ ಗುಂಪಿನಲ್ಲಿ ನೀಡಿದ್ದ ಬ್ಯಾಂಕ್ ಖಾತೆಗಳಿಗೆ ಉಪನ್ಯಾಸಕ ತನ್ನ ಹಾಗೂ ಪತ್ನಿ ಖಾತೆಗಳಿಂದ ಹಂತ ಹಂತವಾಗಿ ಹಣ ವರ್ಗಾಯಿಸಿದ್ದಾರೆ. ಆರಂಭದಲ್ಲಿ ವಂಚಕರು ಖಾಸಗಿ ಕಂಪನಿಯೊಂದರ ಷೇರು ಖರೀದಿಸಲು ತಿಳಿಸಿದ್ದಾರೆ. ಅದರಂತೆ ಉಪನ್ಯಾಸಕ 20,10,014 ಹೂಡಿಕೆ ಮಾಡಿದ್ದಾರೆ. ಇದಕ್ಕೆ ವಂಚಕರು 94,92,003 ಲಾಭ ತೋರಿಸಿದ್ದಾರೆ. ನಂತರ ಉಪನ್ಯಾಸಕ ಹಣ ನಗದೀಕರಿಸಿಕೊಳ್ಳಲು ಪ್ರಯತ್ನಿಸಿದ್ದಾರೆ. ಆಗ ?18 ಲಕ್ಷ ತೆರಿಗೆ ಪಾವತಿಸಿದರೆ ಮಾತ್ರ ಲಾಭಾಂಶ ಮರಳಿಸಲು ಸಾಧ್ಯ ಎಂಬ ಸಂದೇಶ ಬಂದಿದೆ. ಇದರಿಂದ ಅನುಮಾನಗೊಂಡ ಉಪನ್ಯಾಸಕ ಸೆನ್? ಪೊಲೀಸ್? ಠಾಣೆ ತೆರಳಿ ದೂರು ದಾಖಲು ಮಾಡಿದ್ದಾರೆ. ದೂರಿನನ್ವಯ ದಾಖಲಾಗಿದೆ" ಎಂದು ಸಿಇಎನ್ ಠಾಣೆಯ ಸಿಪಿಐ ಪ್ರಸಾದ್ ತಿಳಿಸಿದ್ದಾರೆ.

# ಮಾನ ಹಾನಿ ಪ್ರಕರಣದ ವಿಚಾರಣೆ ಜೂ. 26ಕ್ಕೆ

ಪುಟ 1ರಿಂದ

ಗಾಂಧಿ ವಿರುದ್ಧದ ಮಾನಹಾನಿ ಪ್ರಕರಣದ ವಿಚಾರಣೆ ನಡೆಯುತ್ತಿದ್ದು, ಸಂಬಂಧಪಟ್ಟ ನ್ಯಾಯಾಧೀಶರು ರಜೆಯಲ್ಲಿರುವ ಕಾರಣ ಜೂನ್ 26ಕ್ಕೆ ವಿಚಾರಣೆ ನಿಗದಿಪಡಿಸಲಾಗಿದೆ.

ಬಿಜೆಪಿ ನಾಯಕ ವಿಜಯ್ ಮಿಶ್ರಾ ಅವರು ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು. ಅರ್ಜಿದಾರರ ಪರ ವಕೀಲರಾದ ಸಂತೋಷ್ ಕುಮಾರ್ ಪಾಂಡೆ ಅವರು, ಮಂಗಳವಾರದಂದು ಪ್ರಕರಣದ ವಿಚಾರಣೆಗೆ ಪಟ್ಟಿ ಮಾಡಲಾಗಿತ್ತು. ಆದರೆ ಸಂಬಂಧಪಟ್ಟ ನ್ಯಾಯಾಧೀಶರು ರಜೆಯಲ್ಲಿರುವ ಕಾರಣ ಜೂನ್ 26 ಕ್ಕೆ ಮುಂದೂಡಲಾಗಿದೆ ಎಂದು ಹೇಳಿದರು.

ಈ ಮಾನನಷ್ಟ ಮೊಕದ್ದಮೆ ಪ್ರಕರಣ ಸಂಬಂಧ ಫೆಬ್ರವರಿ 20 ರಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನ್ಯಾಯಾಲಯಕ್ಕೆ ಹಾಜರಾಗಿದ್ದರು ಮತ್ತು ನ್ಯಾಯಾಲಯವು ಅವರಿಗೆ ಜಾಮೀನು ನೀಡಿತ್ತು. ರಾಹುಲ್ ಗಾಂಧಿ ಅವರು ಬೆಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅಮಿತ್ ಶಾ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಆಗಸ್ಟ್ 4, 2018 ರಂದು ದೂರು ದಾಖಲಿಸಲಾಗಿದೆ.

ಬಿಜೆಪಿಯು ಪ್ರಾಮಾಣಿಕ ಮತ್ತು ಸ್ವಚ್ಛ ರಾಜಕಾರಣದಲ್ಲಿ ನಂಬಿಕೆ ಇದೆ ಎಂದು ಹೇಳಿಕೊಳ್ಳುತ್ತಿದೆ. ಆದರೆ ಕೊಲೆ ಪ್ರಕರಣದಲ್ಲಿ "ಆರೋಪಿ"ಯಾಗಿರುವ ವ್ಯಕ್ತಿಯನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡಿದೆ ಎಂದು ರಾಹುಲ್ ಗಾಂಧಿ ಆರೋಪಿಸಿರುವುದಾಗಿ ದೂರುದಾರರು ಉಲ್ಲೇಖಿಸಿದ್ದಾರೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 19 ಜೂನ್ 2024
WEDNESDAY 19 June 2024

# ವೈದ್ಯರು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯವಹಿಸಬಾರದು

ವೈದ್ಯಾಧಿಕಾರಿಗಳ ಸಭೆಯಲ್ಲಿ ಶಾಸಕರ ಅಸಮಾಧಾನ

ಜಾಗೃತಿ ಇರಬೇಕಾದ ವೇಳೆಯೇ ನಿರ್ಲಕ್ಷ ತೋರಿದರೆ ಹೇಗೆ...? ಸಾಗರ : ಡೆಂಗ್ಯೂ ಸೇರಿದಂತೆ ಅತಿ ಹೆಚ್ಚು ಅನಾರೋಗ್ಯ ಪೀಡಿತರು ಆಸ್ಪತ್ರೆಗೆ ಬರುತ್ತಿರುವ ಈ ಹೊತ್ತಿನಲ್ಲಿ ಆಸ್ಪತ್ರೆಗೆ ವೈದ್ಯರುಗಳು ಸಕಾಲಕ್ಕೆ ಬರದಿದ್ದರೆ ಹೇಗೆ, ಡೆಂಗ್ಯೂವಿನಿಂದ ಆಸ್ಪತ್ರೆಯ ಸಿಬ್ಬಂದಿಯೇ ನಿಧನ ಹೊಂದಿದ್ದಾನೆ ಎಂದರೆ ಈಗ ಜಾಗೃತಿವಹಿಸಬೇಕಾದ ಸಮಯ ಹಾಗಿದ್ದೂ ನಿರ್ಲಕ್ಷ ಏಕೆ ಎಂದು ಶಾಸಕ ಬೇಳೂರು ಗೋಪಾಲಕೃಷ್ಣ ಅಸಮಾಧಾನವ್ಯಕ್ತಪಡಿಸಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ವೈದ್ಯಾಧಿಕಾರಿಗಳ ಸಭೆಯಲ್ಲಿ ಮಾತಾನಾಡುತ್ತಾ ಅವರು, ಸಾಗರ ಉಪವಿಭಾಗೀಯ ಆಸ್ಪತ್ರೆಯಲ್ಲಿ ಸಮಯಕ್ಕೆ ಸರಿಯಾಗಿ ವೈದ್ಯರು ಕರ್ತವ್ಯದಲ್ಲಿರುವುದಿಲ್ಲ ಎನ್ನುವ ವಿಷಯ ಪ್ರಸ್ತಾಪಿಸಿ ಆಡಳಿತ ವೈದ್ಯಾಧಿಕಾರಿ ಪರಪ್ಪನವರಿಗೆ ತರಾಟೆ ತೆಗೆದುಕೊಂಡರು.ನಿಮಗೂ ಸೇರಿ ನೋಟಿಸ್ ಜಾರಿ ಮಾಡಿದರೆ ವ್ಯವಸ್ಥೆ ಸರಿಯಾಗಬಹುದಾ ಎಂದು ಪ್ರಶ್ನಿಸಿದ ಶಾಸಕರು, ಇಲ್ಲಿ ಕರ್ತವ್ಯ ಮಾಡುವುದಕ್ಕೆ ಆಸಕ್ತಿ, ಇಷ್ಟ




ಇದ್ದವರು ಇರಲಿ ಸುಮ್ಮನೆ ಅಲಂಕಾರಕ್ಕೆ ಇಲ್ಲಿ ವೈದ್ಯರ ಅಗತ್ಯವಿಲ್ಲ, ನಿಮ್ಮ ಜಾಗಕ್ಕೆ ಬೇರೆಯಾರಾದರೂ ಬರುತ್ತಾರೆ ಎಂದು ಹೇಳಿದ ಅವರು, ಎಂಸಿಎಚ್ ಆಸ್ಪತ್ರೆಯಲ್ಲಿ ದೂರು ಬಂದಿರುವ ವೈದ್ಯರನ್ನು ಪಕ್ಕದ ತಾಲೂಕಿಗೆ ವರ್ಗಾವಣೆ ಮಾಡಿ ಅಲ್ಲಿರುವ ವೈದ್ಯರನ್ನು ಇಲ್ಲಿಗೆ ಹಾಕುವಂತೆ ಜಿಲ್ಲಾ ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಇನ್ನು ರಕ್ತ ಪರೀಕ್ಷೆಯ ವರದಿ ವಿಳಂಬದಿಂದಾಗಿ ಡೆಂಗ್ಯೂ ರೋಗಿಗಳಿಗೆ ತೊಂದರೆಯಾಗುತ್ತಿರುವ ಪ್ರಸ್ತಾಪ ಸಭೆಯಲ್ಲಿ ಚರ್ಚೆಯಾಗಿ, ಎಲ್ಲ ವರದಿಗಳನ್ನು ಮದ್ಯಾಹ್ನ ಕಾಯ್ದಿರಿಸಿ ಒಂದೇ ವೇಳೆ ಕೊಡುವ ಕ್ರಮ ನಿಲ್ಲಿಸಿ ಶೀಘ್ರವಾಗಿ ವರದಿ ಕೊಡುವಂತೆ ಆದೇಶಿಸಿದರು

ಈ ವೇಳೆ ಆಸ್ಪತ್ರೆ ಸಮಿತಿಯ ಗಣಪತಿ ಮಂಡಗಳಲೆ, ಮಧು ಮಾಲತಿ, ಜಯರಾಮ ಹಾಗು ವೈದ್ಯಾದಿಕಾರಿಗಳು. ಮತ್ತಿತರರು ಇದ್ದರು.

## ಮಲೆನಾಡಿನಲ್ಲಿ ಡೆಂಗ್ಯೂ ಪ್ರಕರಣ ಹೆಚ್ಚಳ..

# ಆತಂಕದಲ್ಲಿ ಜನಜೀವನ...

ಹೊಸನಗರ :- ತಾಲೂಕಿನ ರಿಪ್ಪನ್‌ಪೇಟೆಯಲ್ಲಿ ಡೆಂಗ್ಯೂ ಪ್ರಕರಣ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದೆ. ಸಹಜವಾಗಿಯೇ ಜನರು ಆತಂಕಗೊಂಡಿದ್ದಾರೆ. ಪಟ್ಟಣದಲ್ಲಿ ಸ್ವಚ್ಛತೆಗೆ ಹೆಚ್ಚು ಗಮನ ಕೊಡದೇ ಇರುವುದೇ ಇದಕ್ಕೆ ಕಾರಣ ಎನ್ನುವುದು ಈಗ ಗ್ರಾಮಾಡಳಿತಕ್ಕೆ ಅರಿವಾಗಿದೆ. ಆದ್ದರಿಂದ ಸೊಳ್ಳೆಗಳನ್ನು ನಿಯಂತ್ರಿಸಲು ಔಷಧ ಸಿಂಪಡಣೆ ಇತ್ಯಾದಿ ಕ್ರಮಗಳನ್ನು ಈಗ ಗ್ರಾಮ ಪಂಚಾಯ್ತಿ ಕೈಗೊಂಡಿದೆಯಾದರೂ, ರಿಪ್ಪನ್‌ಪೇಟೆ ಸರ್ಕಲ್ಲಿನಲ್ಲಿರುವ



ಗಣೇಶ ಪ್ರಸಾದ್ ಹೋಟೆಲ್ಲಿನ ತ್ಯಾಜ್ಯ ಬೇಕಾಬಿಟ್ಟಿ ವಿಲೇವಾರಿ ಆಗುತ್ತಿರುವ ಬಗ್ಗೆ ಯಾಕೆ ಕ್ರಮ ಕೈಗೊಂಡಿಲ್ಲ ಎನ್ನುವ ಪ್ರಶ್ನೆ ಇಲ್ಲಿನ ನಾಗರೀಕರದ್ದು! ಹೌದು, ರಿಪ್ಪನ್‌ಪೇಟೆ ವಿನಾಯಕ ಸರ್ಕಲ್ಲಿನಲ್ಲಿರುವ ಗಣೇಶ ಪ್ರಸಾದ್ ಹೋಟೆಲ್ ರಿಪ್ಪನ್‌ಪೇಟೆಯಲ್ಲಿ ಒಂದು ಮಟ್ಟಿಗೆ ಜನಪ್ರಿಯವಾದದ್ದು.

ಇಲ್ಲಿ ತಿಂಡಿ ತಿನ್ನಲು ಹೋದರೆ ಘಮ ಘಮ ಪರಿಮಳ ನಿಮ್ಮ ಮೂಗಿಗೆ ಬಡಿಯುತ್ತದೆ. ಅದೇ ನೀವು ಹೋಟೆಲ್ಲು ಹಿಂದುಗಡೆ ಹೋದರೆ ತ್ಯಾಜ್ಯದ ಕೆಟ್ಟ ವಾಸನೆಗೆ ಮೂರ್ಛೆಯೇ ಹೋಗಬೇಕಾಗುತ್ತದೆ. ಹೋಟೆಲ್ಲಿನಲ್ಲಿ ತಟ್ಟೆ ಲೋಟ ತೊಳೆದ ನೀರು, ಮುಸುರೆ, ಖಾಲಿಯಾಗದೇ ಹಾಗೇ ಉಳಿದ ಪದಾರ್ಥಗಳು, ತರಕಾರಿ ತ್ಯಾಜ್ಯವನ್ನೆಲ್ಲ ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡದ ಹೋಟೆಲ್ ಮಾಲೀಕರು, ಹೋಟೆಲ್ ಹಿಂಭಾಗದಲ್ಲಿ ಬೇಕಾಬಿಟ್ಟಿ ಹರಿಯ ಬಿಟ್ಟಿದ್ದಾರೆ. ಆದ್ದರಿಂದಲೇ ಅಲ್ಲಿ ಓಡಾಡುವವರಿಗೆ ಹಾಗೂ ಅಕ್ಕಪಕ್ಕದ ಮನೆ, ವಾಣಿಜ್ಯ ಮಳಿಗೆಗಳ ಮಾಲೀಕರಿಗೆ ಹೋಟೆಲ್ಲಿನ ತ್ಯಾಜ್ಯದ ಕೆಟ್ಟ ವಾಸನೆ ಶಾಪವಾಗಿಬಿಟ್ಟಿದೆ. ಅದ್ಯಾವ ಪರಿ ತ್ಯಾಜ್ಯವನ್ನು ಬೇಕಾಬಿಟ್ಟಿ ಎಸೆದು, ಅದು ಕೊಳೆತು ವಿಷವಾಗಿಸಿಬಿಟ್ಟಿದ್ದಾರೆಂದರೆ, ಸ್ಥಳೀಯರು ಹೇಳುವಂತೆ ಇದೇ ಜಾಗದಲ್ಲಿ ಈವರೆಗೆ ಮೂರ?ನಾಲ್ಕು ಎಮ್ಮೆಗಳು ಪ್ರಾಣ ಬಿಟ್ಟಿವೆಯಂತೆ!

ಹಾಗಿದ್ದರೆ ಹೋಟೆಲ್ಲಿನ ಕೂಗಳತೆ ದೂರದಲ್ಲಿರುವ ರಿಪ್ಪನ್‌ಪೇಟೆ ಗ್ರಾಮ ಪಂಚಾಯ್ತಿಯವರಿಗೆ ಈ ಬಗ್ಗೆ ತಿಳಿದಿಲ್ಲವಾ? ಸ್ಥಳೀಯರು ಹೇಳುವಂತೆ ಈಗಾಗಲೇ ಗ್ರಾಮ ಪಂಚಾಯ್ತಿಗೆ ದೂರು ನೀಡಲಾಗಿದೆಯಂತೆ. ಆದರೆ ಗ್ರಾಮ ಪಂಚಾಯ್ತಿ ಈ ಬಗ್ಗೆ ಗಮನವನ್ನೇ ಹರಿಸಿಲ್ಲ ಎಂದು ದೂರುತ್ತಾರೆ ಸ್ಥಳೀಯರು. ಈ ಬಗ್ಗೆ ಸ್ಥಳೀಯರು ಹೇಳಿದ್ದೇನು ಎಂದು ನೀವೇ ಕೇಳಿ.

ಈಗ ಮಳೆಗಾಲವಾದ್ದರಿಂದ ಈ ಹೋಟೆಲ್ ತ್ಯಾಜ್ಯದ ಕೆಟ್ಟ ವಾಸನೆಗೆ ರಿಪ್ಪನ್‌ಪೇಟೆಗೆ ರಿಪ್ಪನ್‌ಪೇಟೆಯೇ ಮೂರ್ಛೆ ಹೋದರೂ ಆಶ್ಚರ್ಯ ಪಡಬೇಕಿಲ್ಲ. ಒಂದೆಡೆ ರಿಪ್ಪನ್‌ಪೇಟೆಯಲ್ಲಿ ಡೆಂಗ್ಯೂ ಹೆಚ್ಚುತ್ತಿದೆ. ಹೀಗಿರುವಾಗ ಇನ್ನೂ ಸುಮ್ಮನಿದ್ದರೆ ತಮ್ಮ ಜೀವಕ್ಕೇ ಈ ತ್ಯಾಜ್ಯ ತಾಪತ್ರಯ ತರುತ್ತದೆ ಎಂದು ಗೊತ್ತಾಗುತ್ತಿದ್ದಂತೆ ರಿಪ್ಪನ್‌ಪೇಟೆಯ ಕೆಲವು ನಾಗರೀಕರು ಗ್ರಾಮ ಪಂಚಾಯ್ತಿಗೆ ಕಂಪ್ಲೇಂಟ್ ಮಾಡಿ, ಹೋಟೆಲ್ಲಿನವರು ಮಾಡುತ್ತಿರುವ ಅಸಮರ್ಪಕ ಹಾಗೂ ಅಪಾಯಕಾರಿ ತ್ಯಾಜ್ಯ ವಿಲೇವಾರಿಯನ್ನು ಖುದ್ದು ಬಂದು ನೋಡಿಕೊಂಡು ಹೋಗುವಂತೆ ಒತ್ತಾಯಿಸಿದ್ದಾರೆ. ಆದ್ದರಿಂದ ಇತ್ತೀಚೆಗೆ ಗ್ರಾಮ ಪಂಚಾಯ್ತಿಯ ಸೆಕ್ರೆಟರಿ ಬಂದು ಸ್ಥಳವನ್ನು ಪರಿಶೀಲಿಸಿದ್ದಾರೆ. ಗಣೇಶ ಪ್ರಸಾದ್ ಹೋಟೆಲ್ಲಿನವರು ತ್ಯಾಜ್ಯವನ್ನು ಬೇಕಾಬಿಟ್ಟಿ ಎಸೆದು, ಜನರ ಆರೋಗ್ಯವನ್ನು ಹಾಳುಗೆಡವಲು ಮೂಲವಾಗುತ್ತಿದ್ದಾರೆ ಎನ್ನುವುದು ತಿಳಿಯುತ್ತಿದ್ದಂತೆ ಪಿಡಿಓ ಜೊತೆ ಚರ್ಚಿಸಿ ಗ್ರಾಮ ಪಂಚಾಯ್ತಿಯಿಂದ ನೋಟಿಸ್ ಕೊಡುವ ಕ್ರಮಕ್ಕೆ ಮುಂದಾಗಿದ್ದಾರೆ.

ರಿಪ್ಪನ್‌ಪೇಟೆಯ ಮುಖ್ಯ ಸರ್ಕಲ್ಲಿನಲ್ಲಿರುವ, ದಿನಕ್ಕೆ ನೂರಾರು ಸ್ಥಳೀಯ ಹಾಗೂ ಹೊರ ಊರಿನ ಗ್ರಾಹಕರನ್ನು ಸೆಳೆಯುವ ಗಣೇಶ ಪ್ರಸಾದ್ ಹೋಟೆಲ್ಲಿನವರು ಹೀಗೆ ಬೇಕಾಬಿಟ್ಟಿ ತ್ಯಾಜ್ಯ ವಿಲೇವಾರಿ ಮಾಡುತ್ತಿರುವುದರ ದುಷ್ಪರಿಣಾಮ ಗ್ರಾಹಕರ ಮೇಲೂ ಆಗಬಹುದು. ಆದ್ದರಿಂದ ಕೂಡಲೇ ರಿಪ್ಪನ್‌ಪೇಟೆ ಗ್ರಾಮ ಪಂಚಾಯ್ತಿ ಈ ಬಗ್ಗೆ ಕ್ರಮ ಕೈಗೊಳ್ಳುವುದರೊಂದಿಗೆ, ಬೇಕಾಬಿಟ್ಟಿ ತ್ಯಾಜ್ಯ ವಿಲೇವಾರಿ ಮಾಡುವ ಹಾಗೂ ಕೊಳಚೆ ನೀರನ್ನು ಹರಿಬಿಡುವ ಮೂಲಕ ಊರಿನ ಸ್ವಾಸ್ಥ್ಯವನ್ನು ಹಾಳು ಮಾಡಿದ ಕಾರಣದಿಂದ ಈಗಾಗಲೇ ಹೋಟೆಲ್ಲಿನವರು ಪಂಚಾಯ್ತಿಯಿಂದ ಪಡೆದುಕೊಂಡಿರುವ ಜನರಲ್ ಲೈಸೆನ್ಸ್‌ನ್ನು ರದ್ದು ಪಡಿಸಬೇಕಾದ ಅಗತ್ಯವಿದೆ ಎನ್ನುವುದು ಜನರ ಒತ್ತಾಯವಾಗಿದೆ. ಹಾಗೂ ರಿಪ್ಪನ್‌ಪೇಟೆಯಲ್ಲಿ ಸಧ್ಯ ವ್ಯವಹಾರ ನಡೆಸುತ್ತಿರುವ ಶಾಖಾಹಾರಿ ಮತ್ತು ಮಾಂಸಹಾರಿ ಹೋಟೆಲ್ಲುಗಳೆಲ್ಲವೂ ಎಷ್ಟರಮಟ್ಟಿಗೆ ಸ್ವಚ್ಛತೆ ಕಾಯ್ದುಕೊಂಡಿವೆ ಹಾಗೂ ತ್ಯಾಜ್ಯವನ್ನು ಸಮರ್ಪಕ ರೀತಿಯಲ್ಲಿ ವಿಲೇವಾರಿ ಮಾಡುತ್ತಿವೆಯೇ ಎನ್ನುವುದನ್ನು ಗ್ರಾಮ ಪಂಚಾಯ್ತಿ ತುರ್ತಾಗಿ ಗಮನಿಸಬೇಕಾಗಿದೆ. ಈ ಮೂಲಕ ಡೆಂಗ್ಯೂ ಹೆಚ್ಚುತ್ತಿರುವುದನ್ನು ತಡೆಗಟ್ಟಲೂ ಮುಂದಾಗಬೇಕಿದೆ.

# ಗುಟ್ಟಹಳ್ಳಿ ಗ್ರಾಮದಲ್ಲಿ ಕರಗದಮ್ಮ ದೇವಿಯ ಜೀರ್ಣೋದ್ಧಾರ ಮತ್ತು ಪ್ರತಿಷ್ಟಾಪನೆ

ಕೋಲಾರ : ತಾಲೂಕಿನ ನರಸಾಪುರ ಹೋಬಳಿಯ ಗುಟ್ಟಹಳ್ಳಿ ಗ್ರಾಮದಲ್ಲಿ ಶ್ರೀ ಕರಗದಮ್ಮ ದೇವಿ ನೂತನ ದೇವಾಲಯದ ಜೀರ್ಣೋದ್ಧಾರ ಶಿಲಾ ವಿಗ್ರಹ ಪ್ರತಿಷ್ಟಾಪನೆ ಮತ್ತು ವಿಮಾನ ಗೋಪುರದ ಕಲಶ ಕುಂಭಾಭಿಷೇಕ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ತಾಲೂಕಿನ ಬೆಳಮಾರನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗುಟ್ಟಹಳ್ಳಿ ಗ್ರಾಮದಲ್ಲಿ ಕರಗದಮ್ಮ ದೇವಾಲಯದ ಪ್ರತಿಷ್ಟಾಪನೆಯಲ್ಲಿ ಶಾಸಕ ಕೊತ್ತೂರು ಜಿ.ಮಂಜುನಾಥ್, ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್ ಸೇರಿದಂತೆ ಮುಖಂಡರು ಗ್ರಾಮಸ್ಥರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಶಾಸಕ ಕೊತ್ತೂರು ಜಿ ಮಂಜುನಾಥ್ ಮಾತನಾಡಿ ಕೋಲಾರ ಕ್ಷೇತ್ರದ ಜನತೆಗೆ ನೆಮ್ಮದಿ ತರುವಂತೆ ಗ್ರಾಮದಲ್ಲಿ ಪ್ರತಿಷ್ಟಾಪನೆಗೊಂಡಿರುವ ಕರಗದಮ್ಮ ದೇವಿಯ ದರ್ಶನ ಪಡೆದು ಪ್ರಾರ್ಥನೆ ಸಲ್ಲಿಸಿದ್ದೇವೆ ಯಾವುದೇ ದೇವರು ಆಗಿರಲಿ ಶ್ರದ್ಧಾ ಭಕ್ತಿಯಿಂದ ದರ್ಶನ ಮಾಡಿದಾಗ ಮಾತ್ರ ಅದರ ಪೂರ್ಣ ಫಲ ನಮಗೆ



ಪ್ರಾಪ್ತವಾಗುತ್ತದೆ ಈ ದೇವರ ಅನುಗ್ರಹದಿಂದ ರಾಜ್ಯದಲ್ಲಿ ಚನ್ನಾಗಿ ಮಳೆಯಾಗಿ ರೈತರ ಸಂಕಷ್ಟದಿಂದ ದೂರವಾಗಿ ಸುಖ, ಸಂತೋಷವನ್ನು ತರುವಂತಾಗಲಿ ಎಂದರು.

ಶ್ರೀ ಕರಗದಮ್ಮ ದೇವಿ ನೂತನ ದೇವಾಲಯದ ಜೀರ್ಣೋದ್ಧಾರ ಮತ್ತು ಪ್ರತಿಷ್ಠಾಪನಾ ಹಾಗೂ ವಿಮಾನ ಗೋಪುರದ ಕಲಶ ಕುಂಭಾಭಿಷೇಕ ಮಹೋತ್ಸವದ ಅಂಗವಾಗಿ ದೇವರಿಗೆ ವಿವಿಧ ರೀತಿಯ ಹೂವಿನ ಅಲಂಕಾರಗಳು, ವಿಶೇಷ ಪೂಜೆಗಳು, ವಿವಿಧ ರೀತಿಯ ಹೋಮಗಳು, ಮಹಾ ಮಂಗಳಾರತಿ ಹಾಗೂ ತೀರ್ಥ ಪ್ರಸಾದ ವಿನಿಯೋಗ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಊಟದ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಎಲ್.ಅನಿಲ್ ಕುಮಾರ್, ಬಂಗಾರಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೀಸಂದ್ರ ಗೋಪಾಲಗೌಡ, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಚಂಜಿಮಲೆ ಬಿ.ರಮೇಶ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವೈ.ಶಿವಕುಮಾರ್, ದೊಡ್ಡ ಹಸಾಳ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುನಾಥ್, ವಕ್ಕಲೇರಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಗೌರವ ಅಧ್ಯಕ್ಷ ಸುನೀಲ್ ಕುಮಾರ್, ಅಧ್ಯಕ್ಷ ಸಿ ಕನಕರಾಜ, ಕಾರ್ಯದರ್ಶಿ ಜಿ ಎನ್ ಕಲ್ಯಾಣ್ ಕುಮಾರ್, ಖಜಾಂಚಿ ಬಿ ರಾಮಕೃಷ್ಣ, ತೋರಣಕಂಬದಹಳ್ಳಿ ನಾರಾಯಣಸ್ವಾಮಿ, ಕಲ್ವಮಂಜಲಿ ಶ್ರೀರಾಮಪ್ಪ, ಕುಮಾರ್, ನುಕ್ಕನಹಳ್ಳಿ ಶ್ರೀನಿವಾಸ್, ಡಿಎಚ್‌ಓ ಜಗದೀಶ್, ಸದಸ್ಯರಾದ ಕೆ ಬೈರೇಗೌಡ, ಕನಕಪ್ಪ, ವೆಂಕಟಸ್ವಾಮಪ್ಪ ಕೆ.ಪಿ, ಶಂಕರ್ ಜಿ ಎಲ್, ಕೆಂಪೇಗೌಡ, ಮಂಜುನಾಥ್ ಎನ್, ಪ್ರವೀಣ್ ಬಿ, ನಂಜುಂಡಗೌಡ, ಸುತ್ತಮುತ್ತಲಿನ ಗ್ರಾಮಸ್ಥರು ಇದ್ದರು,

# ನ್ಯಾಯಾಧೀಶರ ಬೆಂಗಾವಲು ವಾಹನ ಡಿಕ್ಕಿ

ಗುಂಡ್ಲುಪೇಟೆ: ಹೆದ್ದಾರಿಯಲ್ಲಿ ವೇಗವಾಗಿ ಹೋಗುತ್ತಿದ್ದ ಕಾರು ಡಿಕ್ಕಿಹೊಡೆದು ಪೊಲೀಸ್ ಇಲಾಖೆಯ ಹೊಯ್ಸಳ ವಾಹನ ಜಖಂ ಆಗಿರುವ ಘಟನೆ ಬೇಗೂರು ಸಮೀಪ ನಡೆದಿದೆ. ಕೇರಳಕ್ಕೆ ತೆರಳುತ್ತಿದ್ದ ನ್ಯಾಯಾಧೀಶರ ಬೆಂಗಾವಲಿಗೆ ಹೋಗಿ ವಾಪಸಾಗುತ್ತಿದ್ದ ಬೇಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಹೊಯ್ಸಳ ವಾಹನಕ್ಕೆ ಹಳ್ಳದಮಾದಹಳ್ಳಿ ಗೇಟ್ ಸಮೀಪ ಮೈಸೂರಿನಿಂದ ಕೇರಳಕ್ಕೆ ಹೋಗಲು ಎದುರಿನಿಂದ ಬರುತ್ತಿದ್ದ ಕಾರು ಮತ್ತೊಂದು ಕಾರನ್ನು ಹಿಂದಿಕ್ಕಲು ವೇಗವಾಗಿ ಬಂದು ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಹೊಯ್ಸಳ ಹಾಗೂ ಡಿಕ್ಕಿಹೊಡೆದ ಕಾರುಗಳು ಜಖಂ ಆಗಿದ್ದರೂ ಅದೃಷ್ಟವಶಾತ್ ಯಾರಿಗೂ ಅಪಾಯವಾಗಿಲ್ಲ. ಬೇಗೂರು ಪೊಲೀಸರು ಎರಡು ವಾಹನಗಳನ್ನು ವಶಕ್ಕೆ ಪಡೆದಿದ್ದಾರೆ.



# ಕೊಚ್ಚೆ ನೀರು ಬಾವಿ ಮತ್ತು ಬೋರವೆಲ್‌ಗಳ ಸುತ್ತ ಮಡುಗಟ್ಟಿ ನೀರು ಕಲುಷಿತ

ಮುಂಜಾನೆ ವಾರ್ತೆ ಸುದ್ದಿ

ತಾಳಿಕೋಟಿ: ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ನಿರೀಕ್ಷೆ ಮೀರಿ ಮಳೆಯಾಗಿದೆ ಇದರಿಂದ ಹೆಚ್ಚಿನೆಡೆ ಕೊಚ್ಚೆ ನೀರು ಬಾವಿ ಮತ್ತು ಬೋರವೆಲ್‌ಗಳ ಸುತ್ತ ಮಡುಗಟ್ಟಿ ನೀರು ಕಲುಷಿತಗೊಂಡು ಕುಡಿಯುವ ನೀರಿನಲ್ಲಿ ಬೆರೆತಿರುವ ಸಾಧ್ಯತೆಗಳಿಂದ ವಿವಿಧ ಗ್ರಾಮಗಳಿಂದ ವಾಂತಿಬೇಧಿ ಪ್ರಕರಣಗಳು ಕಾಣಿಸಿಕೊಂಡಿವೆ. ತಾಲ್ಲೂಕಿನ ಮಿಣಜಗಿ-6, ನಾವದಗಿ-5, ಶಿವಪುರ-3, ತಾಳಿಕೋಟೆ-2, ಲಿಂಗದಳ್ಳಿ, ಕಲ್ಲದೇವನಹಳ್ಳಿ, ಮೈಲೇಶ್ವರ, ಹಿರೂರ, ಬ.ಸಾಲವಾಡಗಿಯಿಂದ ತಲಾ ಒಂದು ರೋಗಿ ದಾಖಲಾಗಿ ಗುಣಮುಖರಾಗಿರುವ ಬಗ್ಗೆ ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿ ಮಾಹಿತಿ ಹಂಚಿಕೊಂಡರು. ಬಹಳಷ್ಟು ಜನ ಖಾಸಗಿಯಲ್ಲಿ ತೋರಸಿಲುತ್ತಿದ್ದಾರೆ. ವಿಜಯಪುರದ



ಜಾವೀದ ಪಟೇಲ ಆಸ್ಪತ್ರೆಯಲ್ಲಿ ನಮ್ಮೂರ ಪೇಶಂಟ್ ಇದ್ದಾರೆ ಎಂದು ಮಿಣಜಗಿ ಗ್ರಾಮದ ಬಸವರಾಜ ಮಸ್ಕಾನಾಳ ತಿಳಿಸಿದರು.

ಸ್ಥಳೀಯ ಖಾಸಗಿ ಆಸ್ಪತ್ರೆಗಳಲ್ಲಿ ವಿಚಾರಿಸಿದಾಗ ಗುಂಪಾಗಿ ಬಂದವರಿಲ್ಲ, ಸಾಮಾನ್ಯವಾಗಿ ಒಂದು ಎರಡು ರೋಗಿಗಳಿರುತ್ತಾರೆ. ಗಂಬೀರವಾದವುಗಳಿಲ್ಲ ಎಂಬ ಮಾಹಿತಿ ಲಭ್ಯವಾಯಿತು.

ಈ ಬಗ್ಗೆ ವರದಿಗಾರ"ಯೊಂದಿಗೆ ಮಾತನಾಡಿದ ತಾಲ್ಲೂಕಾ ಆರೋಗ್ಯಾಧಿಕಾರಿ ಡಾ. ಸತೀಶ ತಿವಾರಿ, ಕೆಲದಿನಗಳಿಂದ ಗ್ರಾಮೀಣ ಭಾಗದಿಂದ ವಾಂತಿ-ಬೇಧಿ ಪ್ರಕರಣಗಳು ದಾಖಲಾಗುತ್ತಿದ್ದಂತೆ ನಮ್ಮ ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತರನ್ನು ಕಳಿಸಿ ಪರಿಸ್ಥಿತಿ ಅವಲೋಕನ ಮಾಡಿಸಿರುವೆ. ಸ್ವತಃ ನಾನೂ ಕೂಡ ಶಿವಪುರ ಮಿಣಜಗಿ ಮೊದಲಾದ ಗ್ರಾಮಗಳಿಗೆ ಭೇಟಿ ನೀಡಿರುವೆ. ಶಿವಪುರದಲ್ಲಿ ಬೋರವೆಲ್ ಸುತ್ತ ಕೊಚ್ಚೆ ನೀರು ನಿಂತಿದ್ದು ಅದನ್ನು ಸ್ವಚ್ಛಗೊಳಿಸಿ ನೀರು ನಿಲ್ಲದಂತೆ ಮಾಡುವಂತೆ ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ತಿಳಿಸಿ, ಸ್ವಚ್ಛಗೊಳಿಸಿ ಅಲ್ಲಿ ನೀರು ನಿಲ್ಲದಂತೆ ಮಾಡಿದ್ದಾರೆ. ಅದೇ ರೀತಿ ಮಿಣಜಗಿ ಗ್ರಾಮದಲ್ಲೂ ವಾಂತಿ-ಬೇಧಿ ಪ್ರಕರಣಗಳು ಕಂಡು ಬಂದ ಕುಟುಂಬದ ಮನೆಗಳಿಗೆ ಭೇಟಿ ನೀಡಿ ಕುಡಿಯುವ ನೀರು ಪರಿಶೀಲಿಸಿದ್ದೇವೆ. ನಾವದಗಿಯಲ್ಲೂ ಕಾರಿಗನೂರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಹಿರೇಗೌಡರ ಹಾಗೂ ಅವರ ಸಿಬ್ಬಂದಿಯನ್ನು ಕಳಿಸಿ ಪರಿಶೀಲನೆ ಮಾಡಿ ಗ್ರಾಮಸ್ಥರಿಗೆ ಅಗತ್ಯ ಸೂಚನೆ ನಿಡಿದ್ದೇವೆ. ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ. ಮನೆಮನೆಗೆ ಮಾತ್ರೆ ಇತ್ಯಾದಿಗಳನ್ನು ವಿತರಣೆ ಮಾಡಲಾಗಿದೆ. ಪ್ರಕರಣಗಳು ಗುಂಪಾಗಿ ಇಲ್ಲ, ಅಲ್ಲೊಂದು ಇಲ್ಲೊಂದು ಪ್ರಕರಣಗಳು ಕಂಡು ಬರುತ್ತಿವೆ. ಆದಾಗ್ಯೂ ತುರ್ತು ಕ್ರಮವಾಗಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಆರೋಗ್ಯ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆ. ಶುದ್ಧ ಕುಡಿಯುವ ನೀರು ಪೂರೈಕೆ ಹೊಣೆಗಾರಿಕೆ ಗ್ರಾಮೀಣ ನೀರು ಪೂರೈಕೆ ಇಲಾಖೆ ಹಾಗೂ ಗ್ರಾಮ ಪಂಚಾಯತಿಯವರು ಜಂಟಿಯಾಗಿ ನಿರ್ವಹಿಸುತ್ತಿದ್ದಾರೆ. ಅವರೂ ಈ ಬಗ್ಗೆ ತುರ್ತು ಗಮನ ನೀಡುವಂತೆ ತಿಳಿಸಿದ್ದೇಬೆ ಎಂದರು. ಜಮೀನುಗಳ ಕೆಲಸಕ್ಕೆ ಹೋದವರು ಮಳೆಯಿಂದ ಸಂಗ್ರಹಗೊಂಡ ಮಡುಗಳ ನೀರು ಸೇವನೆಯಿಂದಲೂ ವಾಂತಿಬೇಧಿ ಬರುವ ಸಾಧ್ಯತೆ ಇದೆ. ಸಾಧ್ಯವಾದಷ್ಟು ನೀರನ್ನು ಕುದಿಸಿ, ಶೋಧಿಸಿ ಕುಡಿಯುವಂತೆ ತಿಳಿಸಿದ್ದೇವೆ ಎಂದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 19 ಜೂನ್ 2024
WEDNESDAY 19 June 2024

# ಬಡವರು, ದಲಿತರ ಮಕ್ಕಳನ್ನು ಸರಿಯಾಗಿ ನೋಡಿಕೊಳ್ಳಲು ಆಗದಿದ್ದರೆ ನೀವು ಸೇವೆಯಲ್ಲಿರಲು ಅನ್‌ಫಿಟ್: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ನೀವು ಬಡವರು, ದಲಿತರ ಮಕ್ಕಳನ್ನು ಸರಿಯಾಗಿ ನೋಡಿಕೊಳ್ಳಲು ಆಗದಿದ್ದರೆ ನೀವು ಸೇವೆಯಲ್ಲಿರಲು ಅನ್‌ಫಿಟ್ unfit ಎಂದು ಸಿಎಂ ಸಿದ್ದರಾಮಯ್ಯ ಸಂಬಂಧಪಟ್ಟ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಹಣಕಾಸು ಇಲಾಖೆಯ ಸೂಚನೆಯಂತೆ 2023-24 ರಲ್ಲಿ ಲಭ್ಯವಿದ್ದ 263 ಕೋಟಿ ರೂ. ಖಜಾನೆಗೆ ಜಮಾ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯಗೆ



ಅಧಿಕಾರಿಗಳು ಮಾಹಿತಿ ನೀಡಿದರು.

ಯಾವುದೇ ಯೋಜನೆಯಡಿ ಫಲಾನುಭವಿಗಳ ಆಯ್ಕೆಯಾಗಿಲ್ಲ. ಪ್ರತಿ ವರ್ಷ ಮಾಡಬೇಕಲ್ಲ. ೦

ಯಾಕೆ ಮಾಡಿಲ್ಲ ಎಂದು ಪ್ರಶ್ನಿಸಿದಾಗ, ಶಾಸಕರು ಫಲಾನುಭವಿಗಳ ಪಟ್ಟಿ ನೀಡಿಲ್ಲ. ಆಯ್ಕೆ ಮಾಡಬೇಕಾದ ಫಲಾನುಭವಿಗಳ ಸಂಖ್ಯೆ ಅತ್ಯಂತ ಕಡಿಮೆ ಇರುವುದರಿಂದ ಸಂದಿಗ್ಧ ಪರಿಸ್ಥಿತಿ ಎದುರಾಗುವ ಹಿನ್ನೆಲೆಯಲ್ಲಿ ಶಾಸಕರು ಆಯ್ಕೆ ಮಾಡಲು ಆಸಕ್ತಿ ತೋರಿಸುತ್ತಿಲ್ಲ ಎಂದು ತಿಳಿಸಿದರು.

ಫಲಾನುಭವಿಗಳ ಸಂಖ್ಯೆ ಹೆಚ್ಚಿಸುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಇಲಾಖೆಯ ಒಟ್ಟಾರೆ ಆಯವ್ಯಯದಲ್ಲಿ ಬಿಡುಗಡೆಯಾದ ಮೊತ್ತ 1884.01 ಕೋಟಿ ರೂ. ನಲ್ಲಿ 1879.35 ಕೋಟಿ ವೆಚ್ಚವಾಗಿದ್ದು, 99.75 % ಸಾಧನೆಯಾಗಿದೆ. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಡಿ 389 ವಿದ್ಯಾರ್ಥಿ ನಿಲಯಗಳು, ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು 39,541 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಒದಗಿಸಿದ್ದು, 194.71 ಕೋಟಿ ರೂ. ಒದಗಿಸಲಾಗಿದೆ.

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಯಿಂದ ಸಾಗರದ ಶಾರದಾಂಬಾ ದೇವಸ್ಥಾನಕ್ಕೆ ಡಿ.ಡಿ.ವಿತರಣೆ



ಸಾಗರ ಪಟ್ಟಣದ ಚಾರೋಡಿ/ ಕೊಂಕಣಿ ಆಚಾರ್ ಸಮಾಜದವರ ಶ್ರೀ ಶಾರದಾಂಬಾ ದೇವಸ್ಥಾನದಲ್ಲಿ ಶೃಂಗೇರಿಯ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ನೇತೃತ್ವದಲ್ಲಿ ಜೂ. 23, 24ರಂದು ನಡೆಯಲಿರುವ ಪುನರ್ ಪ್ರತಿಷ್ಠಾಪನ ಮಹೋತ್ಸವ ಸೇರಿದಂತೆ ಹಲವು ಧಾರ್ಮಿಕ ಕಾರ್ಯಗಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಘಟಕದ ವತಿಯಿಂದ ಎರಡು ಲಕ್ಷ ರೂ.ಗಳ ಆರ್ಥಿಕ ಸಹಾಕಾರವನ್ನು ಮಂಗಳವಾರ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ತಾಲೂಕು ಯೋಜನಾಧಿಕಾರಿ ಶಾಂತಾ ನಾಯ್ಕ, ಕೆಲವೇ ದಿನದಲ್ಲಿ ಪಟ್ಟಣದ ಶಾರದಾಂಬಾ ದೇವಸ್ಥಾನದ ಅಮ್ಮನವರ ಪುನಃ ಪ್ರತಿಷ್ಠಾಪನೆ, ಕುಂಬಾಭಿಷೇಕ, ಸಹಸ್ರ ಮೋದಕ ಗಣಹವನ, ಮೊದಲಾದ ಧಾರ್ಮಿಕ ಕಾರ್ಯಗಳು ಅದ್ಧೂರಿಯಾಗಿ ಜರುಗಲಿದೆ. ಜತೆಯಲ್ಲಿ ಪ್ರಸಾದ ಕೊಠಡಿ, ಅರ್ಚಕರ ನಿವಾಸ, ಆಡಳಿತ ಕಚೇರಿ ಮತ್ತು ಶ್ರೀ ಶಾರದಾಂಬಾ ವಾಣಿಜ್ಯ ಸಂಕೀರ್ಣಗಳು ಲೋಕಾರ್ಪಣೆಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಧರ್ಮಸ್ಥಳ ಸಂಘದ ವತಿಯಿಂದ ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಿರುವ ಈ ದೇವಸ್ಥಾನಕ್ಕೆ ಆರ್ಥಿಕ ಸಹಕಾರ ನೀಡಿದ್ದೇವೆ. ಜತೆಯಲ್ಲಿ ಕಾರ್ಯಕ್ರಮದಲ್ಲೂ ನಮ್ಮ ಕೈಲಾದ ಸಹಾಯವನ್ನು ಮಾಡುತ್ತೇವೆ ಎಂದು ಹೇಳಿದರು.

ಸಂಘದ ತಾಲೂಕು ಯೋಜನಾಧಿಕಾರಿ ಶಾಂತಾ ನಾಯ್ಕ ಹಾಗೂ ಹಲವು ಪದಾಧಿಕಾರಿಗಳು ದೇವಸ್ಥಾನದ ಆಡಳಿತ ಸಮಿತಿಯ ಅಧ್ಯಕ್ಷರಿಗೆ ಎರಡು ಲಕ್ಷ ರೂ ಗಳ ಡಿ.ಡಿ. ಹಸ್ತಾಂತರಿಸಿದರು. ದೇವಸ್ಥಾನ ಆಡಳಿತದ ಮಂಡಳಿ ಅಧ್ಯಕ್ಷ ಕೆ.ವಿ.ಜಯರಾಮ್, ಪ್ರಮುಖರಾದ ಚಂದ್ರಶೇಖರ್, ರಾಘವೇಂದ್ರ ವಿ., ಕೆ. ಹರೀಶ್, ಕೃಷ್ಣಮೂರ್ತಿ, ಕುಮಾರ್, ಮಹೇಶ್ ಮೊದಲಾದ ಪದಾಧಿಕಾರಿಗಳು, ಧಮಸ್ಥಳ ಸಂಘದ ಹಲವು ಅಧಿಕಾರಿಗಳು ಹಾಜರಿದ್ದರು.

## ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರಿಂದ ಅಭಿನಂದನಾ ಸಮಾರಂಭ

ತಿ. ನರಸೀಪುರ :- ನೂತನ ಸಂಸದ ಸುನಿಲ್ ಬೋಸ್, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯರವರಿಗೆ ದಿನಾಂಕ:20-06-2024.ರ ಗುರುವಾರ ದಂದು ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರಿಂದ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮೈಮುಲ್ ನಿರ್ದೇಶಕ ಆರ್ ಚೆಲುವರಾಜು ತಿಳಿಸಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಆರ್ ಚೆಲುವರಾಜು

ದಿನಾಂಕ 20-06-2024. ರ ಗುರುವಾರ

ಪಟ್ಟಣದ ನಂಜನಗೂಡು ಮುಖ್ಯ ರಸ್ತೆಯಲ್ಲಿರುವ ಮಹದೇವಪ್ಪ ಸ್ಮಾರಕ ಭವನದಲ್ಲಿ ನೂತನ ಸಂಸದ ಸುನಿಲ್ ಬೋಸ್ ಹಾಗೂ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ರವರನ್ನು ಅಭಿನಂದಿಸಲಾಗುದು ಅಂದು ಬೆಳಿಗ್ಗೆ 10:30 ಕ್ಕೆ ಲೋಕೋಪಯೋಗಿ ಅತಿಥಿ ಗೃಹದ ಬಳಿ ಸ್ವಾಗತಿಸಿಕೊಂಡು ಅಲ್ಲಿಂದ ತೆರೆದ ವಾಹನದಲ್ಲಿ ವಾದ್ಯ ಮೇಳ ಸೇರಿದಂತೆ ವಿವಿಧ ಕಲಾತಂಡಗಳ ಮೂಲಕ ಮೆರವಣಿಗೆ ಮೂಲಕ ಮಹದೇವಪ್ಪ ಸ್ಮಾರಕ ಭವನದ ವೇದಕೆ ಕಾರ್ಯಕ್ರಮಕ್ಕೆ ಕರೆತರಲಾಗುವುದು ಎಂದರು.

ವೇದಿಕೆ ಕಾರ್ಯಕ್ರಮದಲ್ಲಿ ಇಬ್ಬರು ಜನ ನಾಯಕರನ್ನ ಅದ್ದೂರಿಯಾಗಿ ಸನ್ಮಾನಿಸಲಾಗುವುದು ಈ ಒಂದು ಅವಿಸ್ಮರಣೀಯ ಕಾರ್ಯಕ್ರಮಕ್ಕೆ

ತಾಲ್ಲೂಕಿನ. ಕಾಂಗ್ರೆಸ್



ಪಕ್ಷದ ಕಾರ್ಯಕರ್ತರು, ಮುಖಂಡರು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

ಕಾರ್ಯಕ್ರಮವನ್ನು ಕುರಿತು ಮಾಜಿ ತಾ.ಪಂ ಅಧ್ಯಕ್ಷ. ಮಲ್ಲಿಕಾರ್ಜುನ ಸ್ವಾಮಿ ಅಭಿನಂದನಾ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿ ಮಾತಡಿದರು.

ಈ ಸಂದರ್ಭದಲ್ಲಿ ಬನ್ನೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಕೇಶವ,ಜಿ.ಪಂ. ಮಾಜಿ ಅಧ್ಯಕ್ಷ ಸಿ.ಎನ್. ಸಿದ್ದಾರ್ಥ, ಹಿರಿಯ ಮುಖಂಡ ಸೋಸಲೆ ಮಹದೇವಸ್ವಾಮಿ, ತಾ.ಪಂ ನಿಕಟ ಪೂರ್ವ ಅಧ್ಯಕ್ಷ ಹ್ಯಾಕನೂರು ಹೆಚ್.ಎನ್.ಉಮೇಶ್, ಸಾಮಾಜೀಕ ನ್ಯಾಯ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರುಗಳಾದ ಕುಕ್ಕುರ್ ಗಣೇಶ್, ರಾಮಲಿಂಗಯ್ಯ,ಸೋಸಲೆ ಪಿಎಸಿಸಿಬಿ ಅಧ್ಯಕ್ಷ ಪರಶಿವಮೂರ್ತಿ, ಕಲಿಯೂರು ಶಿವಣ್ಣ, ಕೇತಹಳ್ಳಿ ರಾಜಣ್ಣ, ಮಾಜಿ ಪುರಸಭಾ ಅಧ್ಯಕ್ಷ ಮುನಾವರ್ ಪಾಷಾ, ಟೌನ್ ಪಂಚಾಯತಿ ಮಾಜಿ ಅಧ್ಯಕ್ಷರುಗಳಾದ ಬಸವಣ್ಣ, ಕನಕ ಪಾಪು, ಮಾಜಿ ಸದಸ್ಯರುಗಳಾದ ಶಿವ ಸ್ವಾಮಿ,ರಂಗಪ್ಪ, ತಲಕಾಡು ಗ್ರಾಂಪಂ ಉಪಾಧ್ಯಕ್ಷ ನಾಗರಾಜ್ ಮೂರ್ತಿ, ಟೌನ್ ಅಧ್ಯಕ್ಷ ಅಂದಾನಿ ಗೌಡ, ದಯಾನಂದ್, ಅಶೋಕ್, ಸೋಸ್ಲೆ ಮಹೇಶ್ ಸೇರಿದಂತೆ ಮತ್ತಿತರರು ಹಾಜರಿದ್ದರು.

ಕೊರಟಗೆರೆ :- ಕೊರಟಗೆರೆ ಪಟ್ಟಣದ ಶ್ರೀ ಮಾರುತಿ ಕಲ್ಯಾಣ ಮಂಟಪದಲ್ಲಿ ಜೂನ್ 19ರ ಬುದುವಾರ ಬೆಳಿಗ್ಗೆ 10:00 ಗಂಟೆಗೆ ತಾಲೂಕು ಮಟ್ಟದ ಜನಸ್ಪಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ತಾಲೂಕಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಸಿಲ್ದಾರ್ ಮಂಜುನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜನಸ್ಪಂದನಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ಶುಭ ಕಲ್ಯಾಣ್, ಜಿಲ್ಲಾ ಪಂಚಾಯಿತಿ ಸಿಇಒ ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಸೇರಿದಂತೆ ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕ್ ಮಟ್ಟದ ಅಧಿಕಾರಿಗಳು ಭಾಗವಹಿಸಲಿದ್ದು, ಸಾರ್ವಜನಿಕರ ಕುಂದು ಕೊರತೆಗಳನ್ನು ಶೀಘ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ಕ್ರಮ ತೆಗೆದುಕೊಳ್ಳಲಿದ್ದು, ಸಾಧ್ಯವಾದಲ್ಲಿ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸಕಲ ಸಿದ್ಧತೆ ನಡೆಸಲಾಗಿದ್ದು, ಸಾರ್ವಜನಿಕರು ತಮ್ಮ ಕುಂದು ಕೊರತೆಗಳನ್ನು ಜನಸ್ಪಂದನ ಕಾರ್ಯಕ್ರಮದಲ್ಲಿ ಪರಿಹರಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಜನಸ್ಪಂದನ ಕಾರ್ಯಕ್ರಮಕ್ಕೆ ಹಾಜರಾಗಲು ಕೊರಟಗೆರೆ ತಾಸಿಲ್ದಾರ್ ಮಂಜುನಾಥ್ ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿಕೊಂಡಿದ್ದಾರೆ.

## ಸಾಗರದ ಹೊಸಂತೆ ಗ್ರಾಮದಲ್ಲಿ ಮಾಹಿತಿ ಕಾರ್ಯಕ್ರಮ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿಯಲ್ಲಿ ಇಂದು ಜ್ಞಾನ ವಿಕಾಸ ಕಾರ್ಯಕ್ರಮದದಿಯಲ್ಲಿ ಹೊಸಂತೆ ಕಾರ್ಯಕ್ಷೇತ್ರದ ಪೃಥ್ವಿ ಜ್ಞಾನವಿಕಾಸ ಬರ್ತಾಯಿದಾರೆ ಹಾಗೂ ಮಾನಸಿಕ ಮತ್ತು ದೈಹಿಕವಾಗಿ ಮಹಿಳೆಯರು ಸದೃಢ ಆಗಿರಬೇಕು ಎನ್ನುವುದರ ಕುರಿತು ಸೆರಿದ್ದ ಮಹಿಳೆಯರಿಗೆ ಮಾಹಿತಿ ನೀಡಿದರು...



ಕೇಂದ್ರದಲ್ಲಿ ಮಾಹಿತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಕಾರ್ಯಕ್ರಮದಲ್ಲಿ ಕುಮಾರಿ ಶ್ರಾವ್ಯ ಅವರು ಮಾತಾನಾಡಿ ಮಹಿಳೆಯರ ಆರೋಗ್ಯದಲ್ಲಿ ಸಾಮಾನ್ಯವಾಗಿ ಕಾಡುವಂತಹ ಖಿನ್ನತೆ ಕುರಿತು ಮತ್ತು ಮಹಿಳೆಯರು ಯಾವುದರಲ್ಲು ಕಮ್ಮಿ ಇಲ್ಲ.

ಎಲ್ಲಾ ಕ್ಷೇತ್ರದಲ್ಲಿ ಇದ್ದು ನಾವು ಎಲ್ಲರಂತೆ ಎಂದರು ಮಹಿಳೆಯರು ಮನೆಯ ಜವಾಬ್ದಾರಿ ಹೇಗೆ ನಿಭಾಯಿಸುತ್ತಾರೂ ಅದೆ ರೀತಿಯಲ್ಲಿ ಸಂಘದಲ್ಲಿ ತಮಗೆ ನೀಡಿದ ಜವಾಬ್ದಾರಿ ಯಶಸ್ವಿಯಾಗಿ ನಡೆಸಿಕೊಂಡು

ತಾಲ್ಲೂಕು ಸಮನ್ವಯ ಅಧಿಕಾರಿ ಗೌರಮ್ಮ ಮಾತಾನಾಡಿ ಪೂಜ್ಯ ಖಾವಂದರ ಆಶಯದಂತೆ ಪ್ರತಿ ಹಳ್ಳಿಯಲ್ಲಿ ನಮ್ಮ ಸಂಘದ ವತಿಯಿಂದ ಮಹಿಳೆಯರಿಗೆ ಸ್ವಾವಲಂಬಿ

ಜೀವನ ನಡೆಸಲು ಅನೇಕ ಯೋಜನೆಯನ್ನು ಖಾವಂದರು ನೀಡಿದ್ದು ಅದರಿಂದ ಮಹಿಳೆಯರು ಸ್ವ ಉದ್ಯೋಗ ಮಾಡಿ ಜೀವನ ನಡೆಸುತ್ತಾ ಬಂದಿರುವುದು ಹೆಮ್ಮೆಯ ಸಂಗತಿ ಎಂದರು

ಈ ಕಾರ್ಯಕ್ರಮದಲ್ಲಿ ಒಕ್ಕೂಟ ಅಧ್ಯಕ್ಷರು ಹಾಗೂ ಸದಸ್ಯರು ಗ್ರಾಮದ ಮಹಿಳೆಯರು ಪಾಲ್ಗೊಂಡಿದ್ದರು..

## ಹೈವೇ ರಸ್ತೆಯಲ್ಲಿ ಕಳೆದ ಒಂದು ವರ್ಷದಿಂದ ನಾಮಫಲಕ ಇಲ್ಲ



*ನಾಮಫಲಕ ಅವಶ್ಯಕತೆ ಇದೆ ಎಂಬುದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಗಮನಕ್ಕೆ ಬಂದಿಲ್ಲವೆ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ ಇನ್ನಾದರು ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿ ರಸ್ತೆಯಲ್ಲಿ ನಾಮಫಲಕ ಹಾಕಬೇಕು*

ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾಗರ ತಾಳಗುಪ್ಪ ಮಾರ್ಗದ ಮರತ್ತೂರು ಸರ್ಕಲ್‌ನಲ್ಲಿ ನಾಮಫಲಕ ಮುರಿದು ಬಿದ್ದು ಒಂದು ವರ್ಷ ಕಳೆದರು ಇದನ್ನು ಸರಿ ಪಡಿಸಲು ಯಾವ ಅಧಿಕಾರಿಗಳು ಗಮನ ಹರಿಸುತ್ತಾಯಿಲ್ಲ .ರಸ್ತೆ ಪ್ರಾಧಿಕಾರದ ಅಧಿಕಾರಗಳು ಅವರ ಜವಾಬ್ದಾರಿ ಯನ್ನು ಮರೆತು ಹೋಗಿದ್ದಾರೆ. ಇತ್ತ ಕಡೆ ಸ್ಥಳೀಯ ಆಡಳಿತ ಕೂಡಾ ಇದನ್ನು ಸರಿ ಪಡಿಸಲು ಮರೆತಂತೆಕಾಣಯತ್ತಿದೆ. ಪ್ರತಿ ದಿನ ಸಾವಿರಾರು ಪ್ರವಾಸಿಗರು. ಇ ರಸ್ತೆಯಲ್ಲಿ ಸಂಚಾರ ಮಾಡ್ತಾ ಇದ್ದು ಇಲ್ಲಿ ನಾಮಫಲಕ ಅವಶ್ಯಕತೆ ಇದೆ ಎಂಬುದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಗಮನಕ್ಕೆ ಬಂದಿಲ್ಲವೆ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ ಇನ್ನಾದರು ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿ ರಸ್ತೆಯಲ್ಲಿ ನಾಮಫಲಕ ಹಾಕಬೇಕು ...

## ಪ್ರೇಕ್ಷಕರೊಂದಿಗೆ ಕುಳಿತು ಚಿದಂಬರ ಸಿನಿಮಾ ವಿಕ್ಷಿಸಿದ ನಾಯಕನಟ ಅನಿರುದ್

ಕೆ.ಆರ್. ಪೇಟೆ: ಬಹು ನಿರೀಕ್ಷಿತ ಚಿತ್ರವಾದ ಚೀಪ್ ಚಿದಂಬರ ಚಿತ್ರದ ನಾಯಕ ನಟರಾದ ಅನಿರುದ್ ಪಟ್ಟಣದಲ್ಲಿರುವ ಬಸವೇಶ್ವರ ಚಿತ್ರಮಂದಿರದಲ್ಲಿ ಪ್ರೇಕ್ಷಕರೊಂದಿಗೆ ಕುಳಿತು ತಾವೂ ನಟಿಸಿರುವ ಚೀಪ್ ಚಿದಂಬರ ಚಿತ್ರವನ್ನು ವೀಕ್ಷಣೆ ಮಾಡಿದರು ನಂತರ.ಕಿಕ್ಕಿರಿದು ತುಂಬಿದ್ದ ಪ್ರೇಕ್ಷಕರ ಕುರಿತು ಮಾತನಾಡಿದ ಅನಿರುದ್ ರವರು ನಾನು ನಟಿಸಿದ ಚಿತ್ರವನ್ನು ನಿಮ್ಮೊಂದಿಗೆ ಕುಳಿತು ನೋಡುತ್ತಿರುವುದು ತುಂಬಾ ಸಂತೋಷವಾಗುತ್ತಿದೆ ನಿಮ್ಮ ಪ್ರೋತ್ಸಾಹ ನಮ್ಮ ಚಿತ್ರಕ್ಕೆ ಹೀಗೆ ಇರಲಿ ಕನ್ನಡಿಗರು ತಪ್ಪದೆ ಚಿತ್ರಮಂದಿರಕ್ಕೆ ಕುಟುಂಬಸಮೇತವಾಗಿ ಬಂದು ನಮ್ಮ ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು ಪಟ್ಟಣದ ಟಿ,ಬಿ ವೃತ್ತದಲ್ಲಿರುವ ದಿವಂಗತ ಡಾ:ಪುನೀತ್ ರಾಜಕುಮಾರ್

ಪುತ್ಥಳಿಗೆ ಪುಷ್ಪನಮನಗಳನ್ನು ಸಲ್ಲಿಸಿದರು ನಂತರ ಬಿಜಿಎಸ್ ವಿದ್ಯಾಸಂಸ್ಥೆಯ ಬೈರವೈಕ್ಯ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮಿಜೀಯವರ ಪುತ್ಥಳಿಗೂ ಪುಷ್ಪನಮನ ಸಲ್ಲಿಸಿ ಅಲ್ಲಿನ ವಿದ್ಯಾರ್ಥಿಗಳೊಂದಿಗೆ ಭಾವನಾತ್ಮಕ ವಿಷಯಗಳನ್ನು ಹಂಚಿಕೊಂಡು ವಿದ್ಯಾರ್ಥಿಗಳಿಗೂ ಶುಭಾಹಾರೈಸಿದರು ಬಸವೇಶ್ವರ ಚಿತ್ರವನ್ನು ವೀಕ್ಷಣೆ ಮಾಡಿದ ಪ್ರೇಕ್ಷಕರ ಘೋಷಣೆ ಮುಗಿಲು ಮುಟ್ಟಿತ್ತು ಶಾಸಕರಾದ ಹೆಚ್ ಟಿ ಮಂಜುರವರು ಭಾಗವಹಿಸಿ ನಾಯಕನಟ ಅನಿರುದ್ ರವರಿಗೆ ಸನ್ಮಾನಿಸಿ ಚಿದಂಬರ ಚಿತ್ರವು ಶತದಿನೋತ್ಸವ ಆಚರಿಸಲೆಂದು ಶುಭಹಾರೈಸಿದರು

ಇದೇ ಸಂದರ್ಭದಲ್ಲಿ ತಾಲ್ಲೋಕು ಕಾರ್ಯನಿರತ ಪತ್ರಕರ್ತರ ಸಂಘದ



ತಾಲ್ಲೋಕು ಪ್ರಧಾನ ಕಾರ್ಯದರ್ಶಿ ಟಿ.ವೈ.ಅನಂದ್.ವಿಷ್ಣುಸೇನಾ ಜಿಲ್ಲಾಧ್ಯಕ್ಷರಾದ ಪಾಂಡವಪುರ ಶ್ರೀಕಂಠೇಗೌಡ,ಕೆ.ಆರ್.ಪೇಟೆ ತಾಲ್ಲೂಕು ಅಧ್ಯಕ್ಷ ವಿದ್ಯುತ್ ಚೇತನ್,ಅಂಬರೀಶ್ ಅಭಿಮಾನಿ ಸಂಘದ ಅಧ್ಯಕ್ಷರಾದ ರೆಬೆಲ್ ಜಬಿ ಕೆ.ಆರ್.ಜಯರಾಮ್.ಬಸವೇಶ್ವರ ಚಿತ್ರಮಂದಿರ ಮಾಲೀಕರು ರಾಘುಗೌಡ್ರು.ಹರಿಹರಪುರ ನಿಂಗರಾಜು.ಜಯಶಂಕರ್ ರವರು.ಅಲ್ಪಸಂಖ್ಯಾತ ನಗರ ಘಟಕ ಅಧ್ಯಕ್ಷ ಅಯಾಜ್ ಷರೀಫ್,ಅಜ್ಮತ್ ಉಲ್ಲಾ ಷರೀಫ್,ನಯಾಜ್ ಷರೀಫ್,ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಪ್ರೇಕ್ಷಕರು ಉಪಸ್ಥಿತರಿದ್ದರು

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH